ವಿಜಯಪುರ | ಸಂಪುಟ 02 | ಸಂಚಿಕೆ 225 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಅಕ್ಟೋಬರ್ 29, 2024

"ಸಮಾಜದಲ್ಲಿ ಉತ್ತಮ ಬದಲಾವಣೆಯನ್ನು ತರಲು ನಮ್ಮ ಪೋಲಿಸ್ ಇಲಾಖೆ ಕಾರ್ಯ ನಿರ್ವಹಿಸುತ್ತಿದ್ದು, ಸಮಾಜದಲ್ಲಿನ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಲು ಪ್ರತಿಯೊಬ್ಬರು ಜಾಗೃತ ಹೊಂದುವುದು ಅತ್ಯವಶ್ಯಕವಾಗಿದೆ."



■ ಪ್ರಸನ್ನ ದೇಸಾಯಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

### ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಆಯೋಗ ರಚನೆ | ಸಚಿವ ಎಚ್‌ಕೆ ಪಾಟೀಲ್ ಮಾಹಿತಿ

# ಎಸ್‌ಸಿ ಒಳ ಮೀಸಲಾತಿ ಜಾರಿಗೆ ಸಚಿವ ಸಂಪುಟ ಅಸ್ತು

ಬೆಂಗಳೂರು: ಪರಿಶಿಷ್ಟ ಜಾತಿ(ಎಸ್‌ಸಿ)ಗಳಿಗೆ ಒಳಮೀಸಲಾತಿ ಜಾರಿಗೊಳಿಸಲು ಮತ್ತು ಈ ಸಂಬಂಧ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಆಯೋಗ ರಚಿಸಲು ಸೋಮವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಅವರು, ಒಳ ಮೀಸಲಾತಿ ಜಾರಿ ಸಂಬಂಧ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ಆಯೋಗ ರಚಿಸಲಾಗುವುದು ಎಂದರು.

ಎಸ್‌ಸಿಗಳಿಗೆ ಒಳ ಮೀಸಲಾತಿ ಜಾರಿ ಮಾಡುವ ನಿಟ್ಟಿನಲ್ಲಿ ನಂಬಲರ್ಹ ದಾಖಲೆಗಳು ಹಾಗೂ ದತ್ತಾಂಶ ಸಂಗ್ರಹಿಸಲು ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಆಯೋಗ ರಚನೆ ಮಾಡಲು ನಿರ್ಧಾರ ಮಾಡಲಾಗಿದೆ. ಮೂರು ತಿಂಗಳಲ್ಲಿ ಆಯೋಗ ವರದಿ ನೀಡಲಿದೆ ಎಂದರು.



### ತೀರ್ಪು ಮರುಪರಿಶೀಲಿಸಲು ಸುಪ್ರೀಂ ಕೋರ್ಟ್ ನಕಾರ



ನವದೆಹಲಿ: ಪರಿಶಿಷ್ಟ ಜಾತಿ(ಎಸ್ ಸಿ)ಗಳಲ್ಲಿ ಅತ್ಯಂತ ಹಿಂದೂಳಿದ ವರ್ಗಗಳಿಗೆ ಒಳ ಮೀಸಲಾತಿ ನೀಡಲು ರಾಜ್ಯಗಳಿಗೆ ಸಾಂವಿಧಾನಿಕ ಅಧಿಕಾರವಿದೆ ಎಂಬ ತನ್ನ ತೀರ್ಪನ್ನು ಮರುಪರಿಶೀಲಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಮುಖ್ಯ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಬಿ ಆರ್ ಗವಾಯಿ, ವಿಕ್ರಮ್ ನಾಥ್, ಬೇಲಾ ತ್ರಿವೇದಿ, ಪಂಕಜ್ ಮಿಥಾಲ್, ಮನೋಜ್ ಮಿಶ್ರಾ ಮತ್ತು ಸತೀಶ್ ಚಂದ್ರ ಶರ್ಮಾ ಅವರನ್ನೊಳಗೊಂಡ ಏಳು ನ್ಯಾಯಾಧೀಶರ ಸಂವಿಧಾನ ಪೀಠ, ತೀರ್ಪು ಮರು ಪರಿಶೀಲನೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ವಜಾಗೊಳಿಸಿದೆ.

ತೀರ್ಪು ಮರು ಪರಿಶೀಲನೆ ಕೋರಿ ಸಲ್ಲಿಸಲಾದ ಅರ್ಜಿಗಳು ಮೂಲ ಆದೇಶದಲ್ಲಿ ಲೋಪವಾಗಿದೆ ಎಂಬುದನ್ನು ತೋರಿಸುವಲ್ಲಿ

ಒಳಮೀಸಲಾತಿ ನೀಡುವಂತೆ ರಾಜ್ಯದಲ್ಲಿ ಬೇಡಿಕೆ ಹೆಚ್ಚಿತ್ತಿದೆ. ಈ ಬಗ್ಗೆ ಚರ್ಚೆಗಳು ಮತ್ತು ಚಿಂತನೆಗಳು ನಡೆದಿವೆ. ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ನೀಡಲು ಸುಪ್ರೀಂಕೋರ್ಟ್ ತೀರ್ಪು ನೀಡಿತ್ತು. ಈ ಹಿನ್ನೆಲೆಯಲ್ಲಿ ಸಂಪುಟದಲ್ಲಿ ಚರ್ಚೆ ನಡೆದಿದ್ದು, ಒಳ ಮೀಸಲಾತಿ ಕಲ್ಪಿಸಲು ಸಂಪುಟ ಸಭೆ ನಿರ್ಣಯ ಮಾಡಿದೆ ಎಂದು ಎಚ್ ಕೆ ಪಾಟೀಲ್ ತಿಳಿಸಿದರು.

ಆಯೋಗವು ತನ್ನ ವರದಿಯನ್ನು ಸಲ್ಲಿಸುವವರೆಗೆ ಮುಂಬರುವ ಎಲ್ಲಾ ನೇಮಕಾತಿಗಳನ್ನು ಕನಿಷ್ಠ ಮೂರು ತಿಂಗಳ ಕಾಲ ಮುಂದೂಡಲು ಸಂಪುಟ ನಿರ್ಧರಿಸಿದೆ. ಇಂದಿನಿಂದ ಯಾವುದೇ ನೇಮಕಾತಿ ಅಧಿಸೂಚನೆ ಹೊರಡಿಸುವುದಿಲ್ಲ. ಆಯೋಗದ ವರದಿ ಆಧರಿಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಪಾಟೀಲ್ ಮಾಹಿತಿ ನೀಡಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳಿಗೆ ನೀಡಲಾಗಿರುವ ಮೀಸಲಾತಿ(ಖಆ, ಖಖ ಜೆಠಡಿ ಡಿಭಜಡಿತಚೆಣಬಠಟಿ) ಒಳಗಡೆಯೇ ಒಳ ಮೀಸಲಾತಿ ನೀಡಲು ಸುಪ್ರೀಂ ಕೋರ್ಟ್ ಇತ್ತೀಚಿಗೆ ಒಪ್ಪಿಗೆ ನೀಡಿತ್ತು.

# ಬಸವಾದಿ ಶರಣರ ವಿಚಾರಗಳೆ ಬದುಕಿಗೆ ಆದರ್ಶ: ಶಂಕರ ಬಿದರಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಸವಾದಿ ಶರಣರು ಸತ್ಯ ತತ್ವಗಳನ್ನು ಸಾಮರಸ್ಯಗೊಳಿಸಿದವರು. ಶರಣರ ವಿಚಾರಗಳು ನಮಗೆ ಆದರ್ಶ, ನಿತ್ಯ ಸ್ಫೂರ್ತಿ. ಸಮಾಜದಲ್ಲಿರುವ ಬಡಜನರ ಶೈಕ್ಷಣಿಕ, ಧಾರ್ಮಿಕ ಮತ್ತು ಸಾಮಾಜಿಕವಾಗಿ ಎಲ್ಲರನ್ನು ಒಗ್ಗೂಡಿಸಿದ ಕೀರ್ತಿ ಪೂಜ್ಯ ಹಾನಗಲ್ ಕುಮಾರಸ್ವಾಮಿಗಳಿಗೆ ಸಲ್ಲುತ್ತದೆ ಎಂದು ಕರ್ನಾಟಕ ವೀರಶೈವ ಲಿಂಗಾಯತ ಮಹಾಸಭೆಯ ರಾಜ್ಯಾಧ್ಯಕ್ಷ ಶಂಕರ ಬಿದರಿ ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಸಾಂಸ್ಕೃತಿಕ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ 2023–24ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ನಮ್ಮ ಸಮಾಜದಲ್ಲಿ ವೀರಶೈವ, ಲಿಂಗಾಯತ ಸ್ವಲ್ಪ ಅಂತರವಿದೆ. ತಲತಲಾಂತರದಿಂದ ಬಂದ ವೀರಶೈವ ಸಮಾಜ ಧರ್ಮ ಉಳಿಯಬೇಕಾಗಿದೆ. ಎಲ್ಲ ವರ್ಗಗಳ ಸಹಕಾರ ಇಂದು ಅವಶ್ಯಕತೆ ಇದೆ. ನೆರೆಯ ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಲ್ಲಿ ವೀರಶೈವ ಲಿಂಗಾಯತ ಸಮಾಜ ಇದೆ. ಎಲ್ಲರನ್ನು ಜೊತೆಗೂಡಿ ಒಗ್ಗಟ್ಟಾಗಿ ಹೋಗಬೇಕಾಗಿದೆ. ವೀರಶೈವ ಪದ ಹಿಂದುಳಿದ ಓಬಿಸಿ ಪಟ್ಟಿಯಲ್ಲಿ ಸೇ–ರಿಸಬೇಕಾಗಿದೆ. ನಮ್ಮ ಸಮಾಜ, ಧರ್ಮ ಉಳಿಯಬೇಕಾಗಿದೆ. ಸಂಸ್ಕಾರದಿಂದ ದೂರ ಉಳಿಯಬಾರದು ಮಕ್ಕಳು ಒಳ್ಳೆಯ ಶಿಕ್ಷಣ ಪಡೆದು ಬದುಕು ಸುಂದರವಾಗಿಸಿಕೊಳ್ಳಬೇಕು ಎಂದರು.

ಷಣ್ಮುಖಾರೂಢ ಮಠದ ಪೂಜ್ಯ ಸದ್ಗುರು ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು ಆಶೀರ್ವಚನ ನೀಡಿ, 1904ರಲ್ಲಿ ಪೂಜ್ಯ ಹಾನಗಲ್ ಕುಮಾರಸ್ವಾಮಿಗಳು ಸ್ಥಾಪಿಸಿದ ಸಂಸ್ಥೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಂದಿನ ಶಿರಸಂಗಿ ಲಿಂಗರಾಜ ಮಹಾರಾಜರು, ಸೊನ್ನದ, ಆಲಮೇಲ ದೇಸಾಯಿ, ವಾರದ ಮಲ್ಲಪ್ಪ, ಹಾಗೂ ಹಿರಿಯರು ಸಂಸ್ಥೆಯ ಏಳ್ಗೆಗಾಗಿ ಸಾಮಾನ್ಯ ಜನರಿಗೆ ಶೈಕ್ಷಣಿಕ ಸೌಲಭ್ಯ, ಉಚಿತ ಪ್ರಸಾದ ನಿಲಯಗಳನ್ನು ತೆರೆದು ಸಮಾಜದ ಒಳತಿಗಾಗಿ ಶ್ರಮಿಸಿದವರು. ಪೂಜ್ಯರ ಸ್ಮರಣೆ ವೀರಶೈವ ಲಿಂಗಾಯತ ಸಮುದಾಯಕ್ಕೆ ನ್ಯಾಯವನ್ನು ಒದಗಿಸಿದ ಮಹಾಪುರುಷರು ನಮ್ಮ ಇಂದಿನ ಬದುಕು ಸುಂದರವಾಗಬೇಕಾದರೆ ಸಂಸ್ಕಾರ, ಸಂಸ್ಕೃತಿ, ಧರ್ಮ ಬಹಳ ಮುಖ್ಯ ಇದರಲ್ಲಿ ದಾನಿಗಳ ಪಾತ್ರ ತುಂಬಾ ಮಹತ್ವ ಪಡೆಯುತ್ತದೆ. ಇಂದು ನಾವೆಲ್ಲ ಸೇರಿ ವೀರಶೈವ ಲಿಂಗಾಯತ ಧರ್ಮ ಉಳಿಸಲು ಕೈಜೋಡಿಸಬೇಕಾಗಿದೆ ಎಂದು ಕರೆ ನೀಡಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಜಿಲ್ಲಾಧ್ಯಕ್ಷ ವಿ.ಸಿ. ನಾಗಠಾಣ, ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರಾದ ಸಿದ್ರಾಮಪ್ಪ ಉಪ್ಪಿನ, ಸಹದೇವ ನಾಡಗೌಡರ, ಎಂ.ಜಿ. ಯಾದವಾಡ, ಬಿ.ಟಿ. ಈಶ್ವರಗೊಂಡ, ಎಸ್.ಎ. ಪಾಟೀಲ, ವಿದ್ಯಾವತಿ ಅಂಕಲಗಿ ವೇದಿಕೆಯ ಮೇಲೆ ಉಪಸ್ಥಿತ–ರಿದ್ದರು.

ಸಾಹಿತಿಗಳಾದ ಸಂಗಮೇಶ ಬದಾಮಿ, ದೊಡ್ಡಣ್ಣ ಭಜಂತ್ರಿ ಕಾರ್ಯಕ್ರಮ ನಿರ್ವಹಿಸಿದರು. ಡಾ. ವಿ.ಡಿ. ಐಹೊಳ್ಳಿ, ಶಾರದಾ ಕೊಪ್ಪ, ಜ್ಯೋತಿ ಬಾಗಲಕೋಟ, ಉಷಾ ಹಿರೇಮಠ, ತಾಲೂಕಾ ಅಧ್ಯಕ್ಷ ಬಸವರಾಜ ಇಟ್ಟಂಗಿ, ರವೀಂದ್ರ ಬ್ಯಾಕೋಡ, ಮಹಾದೇವ ಹಾಲಳ್ಳಿ, ಬಸವರಾಜ ಒಂಟಗೋಡಿ, ಪರಶುರಾಮ ಪೋಳ, ವಿಠ್ಠಲ ತೇಲಿ, ವಿ.ಬಿ. ಸಾಲಕ್ಕಿ, ಯುವರಾಜ ಜೋಳಕೆ ಉಪಸ್ಥಿತರಿದ್ದರು.

ನಂತರ ಜಿಲ್ಲಾ ಘಟಕ ಮತ್ತು ತಾಲೂಕಾ ಘಟಕಗಳಿಂದ ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ಅವರನ್ನು ಸತ್ಕರಿಸಲಾಯಿತು.

# ಅನಿಷ್ಠ ಪದ್ಧತಿ ತೊಲಗಿಸಲು ಜಾಗೃತಿ ಅತ್ಯವಶ್ಯ :ಎಸ್ಪಿ ಪ್ರಸನ್ನ ದೇಸಾಯಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾಜದಲ್ಲಿ ಉತ್ತಮ ಬದಲಾವಣೆಯನ್ನು ತರಲು ನಮ್ಮ ಇಲಾಖೆ ಕಾರ್ಯ ನಿರ್ವಹಿಸುತ್ತಿದ್ದು, ಸಮಾಜದಲ್ಲಿನ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಲು ಪ್ರತಿಯೊಬ್ಬರು ಜಾಗೃತ ಹೊಂದುವುದು ಅತ್ಯವಶ್ಯಕವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ ಹೇಳಿದರು.

ಸೋಮವಾರ ನಗರದ ಕಂದಗಲ್ಲ ಶ್ರೀ ಹನಮಂತರಾಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಸಮಾಜ ಕಲ್ಯಾಣ ಇಲಾಖಾ ಕಾರ್ಯಕ್ರಮಗಳ ಮಾಹಿತಿ ದೌರ್ಜನ್ಯ ಪ್ರತಿಬಂಧ ಅಧಿನಿಯಮ, ಅಸ್ಪೃಶ್ಯತೆ ನಿವಾರಣೆ ಕುರಿತು ಅರಿವು ಮೂಡಿಸುವ ವಿಚಾರಗೋಷ್ಠಿ ಹಾಗೂ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಸ್ಪೃಶ್ಯತೆಯಂತಹ ಅನಿಷ್ಠ ಪದ್ಧತಿಗಳು ವರದಿಯಾದ ತಕ್ಷಣ ಘಟನೆಗೆ ಸಂಬಂದಿಸಿದಂತೆ ಪ್ರಕರಣ ದಾಖಲಿಸಿಕೊಂಡು ಕ್ರಮ ವಹಿಸಲಾಗುತ್ತದೆ. ಸಮಾಜದಲ್ಲಿನ ಪ್ರತಿಯೊಬ್ಬರು ಮೇಲು–ಕೀಳು ಭಾವನೆ ತೊಡೆದು ಹಾಕಬೇಕು ಎಂದು ಅವರು ಹೇಳಿದರು.

ಪ್ರತಿಯೊಬ್ಬರು ಆರ್ಥಿಕ, ಸಾಮಾಜಿಕ, ರಾಜಕೀಯ ಹಾಗೂ ಶೈಕ್ಷಣಿಕವಾಗಿ ಮುಂದೆ ಬರಬೇಕು, ಬಾಬಾ ಸಾಹೇಬ ಅಂಬೇಡ್ಕರ್, ಸೇರಿದಂತೆ ಮಹನೀಯರು ಹಾಕಿ ಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕು ಎಂದು ಅವರು ಹೇಳಿದರು.



"ಗ್ರಾಮೀಣ ಪ್ರದೇಶದಲ್ಲಿ ಸ್ಮಶಾನ, ರಸ್ತೆ, ಸಾಮಾಜಿಕ ನ್ಯಾಯ ಹೊಲಗಳಲ್ಲಿ ಕಾಲುದಾರಿ ಹಲವು ಸಮಸ್ಯೆಗಳಿಗೆ,ನಮ್ಮ ವ್ಯಾಪ್ತಿಗೆ ಬರದಿದ್ದರೂ ಸಂಬಂಧಿಸಿದ ಇಲಾಖೆಗಳ ಸಹಯೋಗದೊಂದಿಗೆ ಸಮಸ್ಯೆಗಳನ್ನು ಇತ್ಯರ್ಥ ಪಡಿಸಲು ಕ್ರಮ ವಹಿಸಲಾಗುತ್ತಿದೆ."

■ ಪ್ರಸನ್ನ ದೇಸಾಯಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಜಿಲ್ಲಾ ದೌರ್ಜನ್ಯ ತಡೆ ಜಿಲ್ಲಾ ಸಲಹಾ ಸಮಿತಿ ಸದಸ್ಯ ಅಭಿಷೇಕ ಚಕ್ರವರ್ತಿ ಮಾತನಾಡಿ, ಸೌಲಭ್ಯಗಳ ಸಮರ್ಪಕವಾಗಿ ಬಳಸಿಕೊಂಡು ಆರ್ಥಿಕ–ಶೈಕ್ಷಣಿಕವಾಗಿ ಸಬಲತೆ ಹೊಂದಬೇಕು. ಸಮಾಜದಲ್ಲಿ ಸೌಹಾರ್ದತೆಯಿಂದ ಬಾಳಲು ಪೊಲೀಸ್ ಇಲಾಖೆ ಕೂಡ ಸಹಕಾರ ನೀಡಬೇಕು. ಬುದ್ಧ, ಬಸವ, ಡಾ. ಅಂಬೇಡ್ಕರ ಅವರ ಕನಸುಗಳು ಸಾಕಾರಗೊಳ್ಳಬೇಕು. ಸಾಕಾರಗೊಳ್ಳುವ ನಿಟ್ಟಿನಲ್ಲಿ ಹೆಚ್ಚು ಹೆಚ್ಚು ಸಾರ್ವಜನಿಕರು ಇಂತಹ ಕಾರ್ಯಾಗಾರಗಲ್ಲಿ ಭಾಗವಹಿಸಿ, ಜಾಗೃತಿ ಹೊಂದಬೇಕು ಎಂದು ಹೇಳಿದರು.

ನ್ಯಾಯವಾದಿಗಳಾದ ಶಿವುಕುಮಾರ ಪೂಜಾರಿ ಉಪನ್ಯಾನ ನೀಡಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರೂದ್ದಿನ್ ಸೌದಾಗರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಮಾನವರ, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾ–ರಿಗಳಾದ ನಾಗರಾಜ ಲಂಬು, ಅಡಿವೆಪ್ಪ ಸಾಲಗಲ್, ಸಿದ್ದು ರಾಯಣ್ಣವರ, ರಾವುತ ತಳಗೇರಿ, ನಿರ್ಮಲಾ ಹೊಸಮನಿ, ಬಿ.ಎಸ್.ಗಸ್ತಿ, ಮಲ್ಲು ಬಿಜ್ಜೂರ, ಸೋಮಲು ಲಮಾಣಿ, ಮಹಾಂತೇಶ ಸಾಸಬಾಳ, ಪರಶುರಾಮ ದಿಂಡವಾರ, ಬಾಬು ಸಜ್ಜನ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತ–ರಿದ್ದರು.



ಅಸ್ಪೃಶ್ಯತೆ ಕುರಿತು ಜಿಲ್ಲೆಯ ಬಹುತೇಕ ಗ್ರಾಮೀಣ ಪ್ರದೇಶಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಶ್ಪೃಶ್ಯತೆ ಅನ್ನುವುದು ಮನಸ್ಸಿನಿಂದ ಮರೆಯಾಗಬೇಕು. ಮಾನಸಿಕ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಸಂವಿಧಾನಬದ್ಧ ಹಕ್ಕು ಮತ್ತು ಪ್ರತಿಯೊಬ್ಬರಿಗೂ ಸೌಲಭ್ಯ ದೊರಕಬೇಕು. ಅದರಲ್ಲಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಶಿಕ್ಷಣ ಪಡೆಯುವ ಮೂಲಕ ಜಾಗೃತಿ ಹೊಂದಬೇಕು."

■ ಸೋಮಲಿಂಗ ಗೆಣ್ಣೂರ
ಅಪರ ಜಿಲ್ಲಾಧಿಕಾರಿ

### ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಕ್ಷೇತ್ರದಲ್ಲಿ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸಲು ಕಾರ್ಯಾಗಾರ

# ಮಹಿಳಾ ವಿವಿ: ಅಧ್ಯಾಪಕರ ‘ಸಾಮರ್ಥ್ಯ ವೃದ್ಧಿ’ ಕಾರ್ಯಾಗಾರ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಪ್ರಸ್ತುತ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಕ್ಷೇತ್ರದಲ್ಲಿ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸಲು ಅಧ್ಯಾಪಕರ ‘ಸಾಮರ್ಥ್ಯ ವೃದ್ಧಿ’ ಕಾರ್ಯಾಗಾರಗಳು ಮಹತ್ವಪೂರ್ಣವಾಗಿದ್ದು, ಲಭ್ಯವಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮಾರ್ಗಗಳನ್ನು ಕಲಿಯಲು ಈ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ ಎಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಎಮ್.ಪಾಟೀಲ್ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಮತ್ತು ವ್ಯವಹಾರ ನಿರ್ವಹಣೆ ಅಧ್ಯಯನ ವಿಭಾಗಗಳು ಹಾಗೂ ನವದೆಹಲಿಯ ಐಸಿ–ಎಸ್‌ಎಸ್‌ಆರ್ ಪ್ರಾಯೋಜಕತ್ವದಲ್ಲಿ ಜಂಟಿಯಾಗಿ ಆಯೋಜಿಸಿದ್ದ ‘ಶೈಕ್ಷಣಿಕ ಸಂಶೋಧನಾ ಬರವಣಿಗೆ’ ಎಂಬ ವಿಷಯದ ಕುರಿತು ಎರಡು ವಾರಗಳ ‘ಸಾಮರ್ಥ್ಯ ವೃದ್ಧಿ’ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಕಾರ್ಯಾಗಾರ ದೈಹಿಕ ಶಿಕ್ಷಣ, ಸಮಾಜ ವಿಜ್ಞಾನ, ವಾಣಿಜ್ಯ ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಸಂಶೋಧನೆಯಲ್ಲಿ ಎದುರಿಸಬೇಕಾದ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಮುಖ್ಯ ವೇದಿಕೆಯಾದಂತಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕುಪ್ಪಂ ದ್ರಾವಿಡಿಯನ್ ಯೂನಿವರ್ಸಿಟಿಯ ಡೀನ್ ಫ್ಯಾಕಲ್ಟಿ ಸ್ಕೂಲ್ ಆಫ್ ಎಜುಕೇಶನ್ ಪ್ರೊ. ಡಿ ಶ್ರೀನಿವಾಸ ಕುಮಾರ್ ಮಾತನಾಡಿ, ಸಂಶೋಧನಾ ವಿದ್ಯಾರ್ಥಿಗಳು ತಮ್ಮ ಆಸಕ್ತಿಯುತ ಕ್ಷೇತ್ರದಲ್ಲಿ ಸಂಶೋಧನೆಯನ್ನು ಕೈಗೊಂಡರೆ ಉತ್ತಮವಾದ ಫಲಿತಾಂಶವನ್ನು ನೀಡಬಹುದು ಮತ್ತು ಸಮಾಜಕ್ಕೆ ಉತ್ತಮ ಕೊಡುಗೆಯನ್ನು ನೀಡಬಹುದು ಎಂದರು. ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾರ್ಯಾಗಾರದ ನಿರ್ದೇಶಕ ಪ್ರೊ..ರಾಜ–ಕುಮಾರ್ ಮಾಲಿಪಾಟೀಲ್ ಮಾತನಾಡಿ, ಸಂಶೋಧನಾ ವಿದ್ಯಾರ್ಥಿಗಳಿಗೆ ಈ ಕಾರ್ಯಾಗಾರ ತುಂಬಾ ಉಪಯುಕ್ತವಾಗಿತ್ತು ಎಂದರು.

ಕಾರ್ಯಾಗಾರದ ಸಹಸಯೋಜಕ ಡಾ. ಚಂದ್ರಶೇಖರ ಮಠಪತಿ, ಪ್ರಾಧ್ಯಾಪಕರು, ವಿದ್ಯಾರ್ಥಿನಿಯರು ಹಾಗೂ ಸಂಶೋಧನಾ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

### ವಿಜಯಪುರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ ಭೂಮಿಪೂಜೆ

# ಅಭಿವೃದ್ಧಿ ವಂಚಿತವಾಗಿದ್ದ ವಿಜಯಪುರ ಈಗ ಮಾದರಿ ನಗರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಜನತೆಯ ಸಹಕಾರದಿಂದ ಅಭಿವೃದ್ಧಿ ವಂಚಿತವಾಗಿದ್ದ ವಿಜಯಪುರ ನಗರವನ್ನು ಪ್ರಸ್ತುತ ಮಾದರಿ ನಗರವನ್ನಾಗಿ ಅಭಿವೃದ್ಧಿಪಡಿಸಲು ಸಾಧ್ಯವಾಯಿತು ಎಂದು ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದಿಂದ ಸನ್ 2023ನೇ ಸಾಲಿನಲ್ಲಿ ಕೈಗೆತ್ತಿಕೊಂಡ ಕಾಮಗಾರಿಗಳಿಗೆ ಹಿಂದೇಯೇ ಮಂಜೂರಿಸಲಾದ ವಿವಿಧ ಅಭಿವೃದ್ಧಿ ಕಾಮಗಾ–ರಿಗಳಿಗೆ ಸೋಮವಾರ ನಗರದ ವಿವಿಧೆಡೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಪ್ರತಿಯೊಂದರಲ್ಲಿಯೂ ಕೊನೆಯ ಸ್ಥಾನದಲ್ಲಿರುತ್ತಿದ್ದ ವಿಜಯಪುರ ನಗರ ಸದ್ಯ, ಅಭಿವೃದ್ಧಿ ಮತ್ತು ಸಾಧನೆಯಲ್ಲಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಳ್ಳುವಂತೆ ಮಾಡಲಾಗಿದೆ ಎಂದರು.

ಮೊದಲಿಗೆ ಲಿಂಗೇಶ್ವರ ಕಾಲನಿ ಉದ್ಯಾನವನದಲ್ಲಿ, ನಮರ್ಥ ನಗರದ ರಿಂಗ್ ಮನಗೂಳಿ ರಸ್ತೆ ಉದ್ಯಾನವನದಲ್ಲಿ, ಯೋಗಾಪುರ ಕಾಲೊನಿಯ ಡಾ.ಅಂಬೇಡ್ಕರ್ ವೃತ್ತದ ಹತ್ತಿರ, ರಿಂಗ್ ರಸ್ತೆಯ ಚಿದಂಬರ ಗುಡಿ ಹತ್ತಿರ ಹಾಗೂ ವಾ.ನಂ.22 ರಲ್ಲಿ ಬರುವ ಓನಕೆ ಓಬವ್ವ ಉದ್ಯಾನವನದಲ್ಲಿ, ರೂ.22.70 ಲಕ್ಷ ಮೊತ್ತದಲ್ಲಿ 12.00/12.50 ಮೀ ಎತ್ತರದ ಹೈಮಾಸ್ಟ್ ಗಳ ಅಳವಡಿಕೆ ಕಾಮಗಾರಿಗಳಿಗೆ ವಾ.ನಂ.21 ರಲ್ಲಿ ಬರುವ ಚಿದಂಬರ ಗುಡಿ ಹತ್ತಿರ ಭೂಮಿಪೂಜೆ ನೆರವೇರಿಸಿದರು.

ನಂತರ ರೂ.47.49 ಲಕ್ಷ ಮೊತ್ತದಲ್ಲಿ ಕೈಗೊಳ್ಳಲಾಗುವ ಸಾಯಿಪಾರ್ಕ್ ಏಳು ಮಕ್ಕಳ ತಾಯಿ ಗುಡಿ ಹತ್ತಿರ ಖಾಲಿ ಜಾಗದಲ್ಲಿ ಗಾರ್ಡನ್ ಅಭಿವೃದ್ಧಿ ಹಾಗೂ ಮಹಾಲಕ್ಷ್ಮೀ ಗುಡಿ ಹತ್ತಿರದ ಉದ್ಯಾನವನದ ಅಭಿವೃದ್ಧಿ ಕಾಮಗಾ–ರಿಗಳಿಗೆ ಸಾಯಿಪಾರ್ಕ್ ಏಳು ಮಕ್ಕಳ ತಾಯಿ ಗುಡಿಯ ಹತ್ತಿರ ಭೂಮಿಪೂಜೆಯನ್ನು ನೆರವೇರಿಸಿದರು.

ತದ ನಂತರ ರೂ.65.34 ಲಕ್ಷ ಮೊತ್ತದಲ್ಲಿ ಕೌತಾಳ ಲೇಔಟ್ ಜಯಲಕ್ಷ್ಮೀ ನಗರದ ಹತ್ತಿರದ ಉದ್ಯಾನವನದ ಅಭಿವೃದ್ಧಿ, ರಾಮನಗರದ ಉದ್ಯಾನವನದಲ್ಲಿ ಚೈನ್ ಲಿಂಕ್ ಮೆಶ್, ಪಿಡಿಜೆ ಲೇಔಟ್ ಕೃಷ್ಣಾ ನಗರದಲ್ಲಿ, ಆದಿಲ್ ಶಾಹಿ ನಗರದಲ್ಲಿ, ಗ್ಯಾಂಗಬಾವಡಿ ಓಂ ಗಣಪತಿ ಗುಡಿ ಹತ್ತಿರ, ಎಂ.ಬಿ.ಪಾಟೀಲ ನಗರದ (ಸಿ ಬ್ಲಾಕ್) ದಲ್ಲಿಯ, ತೋಂಟದಾರ್ಯ ಲೇಔಟ್ ದಲ್ಲಿ, ವಾ.ನಂ.12 ರ ಆನಂದ ನಗರದ ದಾನಮ್ಮ ದೇವಿ ಗುಡಿ ಹತ್ತಿರ ಸುಮಾರು 12.00/12.50 ಮೀ ಎತ್ತರದ ಹೈಮಾಸ್ಟ್ ಗಳನ್ನು ಅಳವಡಿಸುವ ಕಾಮಗಾರಿಗಳಿಗೆ ಕೌತಾಳ ಲೇಔಟ್ ಜಯಲಕ್ಷ್ಮೀ ನಗರದ ಹತ್ತಿರ ಭೂಮಿಪೂಜೆಯನ್ನು ನೆರವೇರಿಸಿದರು.

ಪ್ರತಿ ಭೂಮಿಪೂಜೆ ಸಮಾಮಭದ ಬಳಿಕೆ ನೆರೆದ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದ ಶಾಸಕರು, ಸ್ಥಳದಲ್ಲೇ ಹಲವಾರು ಪರಿಹಾರ ಕಲ್ಪಿಸಿದರು. ಮಹಾನಗರ ಪಾಲಿಕೆ ಸದಸ್ಯರು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು, ಬಡಾವಣೆ, ಕಾಲೊನಿಗಳ ನಿವಾಸಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಮಲಾನಗರದಲ್ಲಿ ಮಾಳಿಂಗರಾಯನ ಜಾತ್ರೆ



ಕಲಬುರಗಿ : ಜಿಲ್ಲೆಯ ಅಳಂದ ತಾಲೂಕಿನ ಕಮಲಾನಗರ ಗ್ರಾಮದಲ್ಲಿ ಪುರಾತನ ಇತಿಹಾಸದ ಊರಪ್ರಮುಖಆರಾಧ್ಯದೇವರಾದಮಾಳಿಂಗರಾಯನ ಜಾತ್ರೆ ಪುರಾತನ ಪದ್ಧತಿಯಂತೆ ಜರುಗಲಿದೆ.ಅ. 30 ರಂದು ನೀರ ತುಂಬುವ ದಿನದಂದು ಎಲಿಪೂಜೆ ನೆರವೇರುವುದು.

31 ರಂದು ಚತುರ್ದಶಿ ದಿನದಂದು ಬೆಳಿಗ್ಗೆ ಮಾಳಿಂಗರಾಯ ಬೀರಲಿಂಗೇಶ್ವರನಿಗೆ ಆರತಿ ಮಾಡುವರು. ಮರದ ತುಂಬ ದೀಪಗಳನ್ನು ಹಚ್ಚಿ ಬೆಳಗುವರು. ಸಾಯಂಕಾಲ ಕಾರ್ಣಿಕ (ಹೇಳಿಕೆ) ನುಡಿಯುವುದು. ನವೆಂಬರ್ 1 ರಂದು ಅಮವಾಸ್ಯೆಯ ದಿನ ಬೆಳಿಗ್ಗೆ ಎಲಿ ಪೂಜೆ ಇಳಿಸುವುದು ಹಾಗೂ ಅಭಿಷೇಕ ಮಾಡುವುದು. ಅಂದು ಸಾಯಂಕಾಲ ಡೊಳ್ಳು ವಾದ್ಯಗಳೊಂದಿಗೆ ಗ್ರಾಮದ ಪ್ರತಿ ಮನೆಗೂ ಪಲ್ಲಕ್ಕಿ ತೆರಳುವುದು ಹಾಗೂ ಪಲ್ಲಕ್ಕಿ, ಕಳಸ, ಮೂರ್ತಿ, ಎಲಿಪಿಂಜರ ಇವೆಲ್ಲವೂಗಳನ್ನು ಮೂಲ ಸ್ಥಳಕ್ಕೆ ಒಪ್ಪಿಸುವುದು.ನ.2 ರಂದು ದೀಪಾವಳಿ ಪಾಡ್ಯ ದಿನ ಬೆಳಿಗ್ಗೆ ಮಾಳಿಂಗರಾಯನಿಗೆ ಆರತಿ ಬೆಳಗುವ ಕಾರ್ಯಕ್ರಮ. ಸ್ವಯಂ ಆರತಿ ಬೆಳಗುವದು. ಯಾರಿಂದಲೂ ಬೆಳಗಿಸಿಕೊಳ್ಳುವುದಿಲ್ಲ. ಇದು ಹಿಂದಿನಿಂದ ನಡೆದು ಬಂದ ಪದ್ಧತಿಯಾಗಿದೆ. ಮಾಳಿಂಗರಾಯನ, ಬೀರಲಿಂಗೇಶ್ವರರ ಜಾತ್ರೆಯು ವೈಭವಪೂರಿತವಾಗಿ ಕಳೆದ ಎಂಟು ನೂರು ವರ್ಷದಿಂದ ನಡೆಯುತ್ತ ಬಂದಿದೆ. ಜಾತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಿ ಪುನೀತರಾಗಬೇಕೆಂದು ಕಲಬುರಗಿ ವಿಶ್ವಾರಾಧ್ಯ ಸಮಿತಿ ಸಂಘಟನಾ ಕಾರ್ಯದರ್ಶಿ ಬಸವರಾಜ ಶೀಲವಂತ ಅಂಬಲಗಿ ತಿಳಿಸಿದ್ದಾರೆ.

# ನ. 3 ರಿಂದ ವಾಗ್ದರಿ ರಾಚೋಟೇಶ್ವರ ಜಾತ್ರಾ ಮಹೋತ್ಸವ



ಕಲಬುರಗಿ : ಜಿಲ್ಲೆಯ ಅಳಂದ ತಾಲೂಕಿನ ವಾಗ್ದರಿ ಗ್ರಾಮದ ರಾಚೋಟೇಶ್ವರ ಜಾತ್ರಾ ಮಹೋತ್ಸವ ನವೆಂಬರ್ 3 ಮತ್ತು 4 ರಂದು ನಡೆಯಲಿದೆ.ಹಾರಕೂಡ ಸಂಸ್ಥಾನ ಹಿರೇಮಠದ ಡಾ. ಚನ್ನವೀರ ಶಿವಾಚಾರ್ಯರು ಮತ್ತು ಮುತ್ಯಾನ ಬಬಲಾದಿಯ ಗುರುಪಾದಲಿಂಗ ಮಹಾಶಿವಯೋಗಿಗಳ ಸಾನಿಧ್ಯದಲ್ಲಿ ಜಾತ್ರೆ ಜರುಗುವದು. 3 ರಂದು ಸಂಜೆ 4.05 ಗಂಟೆಗೆ ಅಗ್ನಿಪೂಜೆ,ಸಂಜೆ 6.30 ಕ್ಕೆ ರಥೋತ್ಸವ,ರಾತ್ರಿ 8 ಗಂಟೆಗೆ ಪುರವಂತರ ಸೇವೆ,ರಾತ್ರಿ 11 ಗಂಟೆಗೆ, ಪಂ. ವೇದಮೂರ್ತಿ ಗುರುಲಿಂಗಯ್ಯ ಸ್ವಾಮಿಗಳು ಹೂವಿನಹಳ್ಳಿ ಅವರಿಂದ ಪ್ರವಚನ ನಡೆಯಲಿದೆ. 4 ರಂದು ಮಧ್ಯಾಹ್ನ 1 ಗಂಟೆಗೆ ಜಂಗಿ ಪೈಲ್ವಾನರ ಕುಸ್ತಿ,ರಾತ್ರಿ 8ಕ್ಕೆ ದೇವಾಲಯದಿಂದ ಗ್ರಾಮಕ್ಕೆ ಪಲ್ಲಕ್ಕಿ ತೆರಳುವದು.ನ.1 ರಂದು ರಾತ್ರಿ 8 ಗಂಟೆಗೆ ಗ್ರಾಮದಿಂದ ದೇವಸ್ಥಾನದವರೆಗೆ ಪಲ್ಲಕ್ಕಿ ಮೆರವಣಿಗೆ,2 ರಂದು ಬೆಳಿಗ್ಗೆ 6 ಗಂಟೆಗೆ ರುದ್ರಾಭಿಷೇಕ ನಡೆಯಲಿದೆ ಎಂದು ಕಲಬುರಗಿ ನಗರ ವಿಶ್ವಾರಾಧ್ಯ ಸೇವಾ ಸಮಿತಿಯ ಸಂಘಟನಾ ಕಾರ್ಯದರ್ಶಿ ಬಸವರಾಜ ಶೀಲವಂತ ಅಂಬಲಗಿ ಅವರು ತಿಳಿಸಿದ್ದಾರೆ.

# ಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಂಡ ಮಾಜಿ ಶಾಸಕ ತೇಲ್ಕೂರ್



ಸೇಡಂ: ಸೇಡಂ ಮತಕ್ಷೇತ್ರ ವ್ಯಾಪ್ತಿಯ ಚಿಂಚೋಳಿ ತಾಲೂಕಿನ ಸುಲೇಪೇಟ್ ಗ್ರಾಮದಲ್ಲಿ ಮಾಜಿ ಶಾಸಕರಾದ "ರಾಜಕುಮಾರ ಪಾಟೀಲ್ ತೇಲ್ಕೂರ ಅವರು ಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಂಡು ವಿವಿಧ ಅಂಗಡಿಗಳಿಗೆ ತೆರಳಿ 8800002024 ನಂಬರ್ ಗೇ ಮಿಸ್ ಕಾಲ್ ಮಾಡಿಸಿ ಸದಸ್ಯತ್ವ ನೊಂದಣಿ ಮಾಡಿಸಿದರು. ನಂತರ ಸಿದ್ದಯ್ಯ ಸ್ವಾಮಿ ಅವರ ಕಿರಾಣಿ ಅಂಗಡಿಯು ತಡರಾತ್ರಿ ವಿದ್ಯುತ್ ಅವಘಡದಿಂದ ಸುಟ್ಟು ಬೂದಿಯಾಗಿರುವ ಘಟನಾ ಸ್ಥಳಕ್ಕೆ ಭೇಟಿ ನೀಡಿ ಅಂಗಡಿ ಮಾಲಿಕರಿಗೆ ಧೈರ್ಯ ಹೇಳಿ ಚಿಂಚೋಳಿ ತಾಲೂಕಿನ ತಹಶೀಲ್ದಾರರಿಗೆ ದೂರವಾಣಿ ಮುಖಾಂತರ ಕರೆ ಮಾಡಿ ಸೂಕ್ತ ಪರಿಹಾರ ಒದಗಿಸಲು ತಿಳಿಸಿದರು.ಈ ವೇಳೆಯಲ್ಲಿ ಮಂಡಲ ಅಧ್ಯಕ್ಷರು ಸುಲೇಪೇಟ್ ಗ್ರಾಮದ ಪಕ್ಷದ ಮುಖಂಡರು ಕಾಯ9ಕತರು ಉಪಸ್ಥಿತರಿದ್ದರು.

# ಮಣೂರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರ ಸಾಧನೆ:ಅಪರೂಪದ ಗುಲಿಯನ್ ಬ್ಯಾರೆ ಸಿಂಡ್ರೋಮ್ ಕಾಯಿಲೆಗೆ ಯಶಸ್ವೀ ಚಿಕಿತ್ಸೆ



ಕಲಬುರಗಿ: ಅತಿ ಅಪರೂಪದ ಗುಲಿಯನ್ ಬ್ಯಾರೆ ಸಿಂಡ್ರೋಮ್ ಕಾಯಿಲೆಯಿಂದ ನರಳುತ್ತಿದ್ದ ಯುವಕನಿಗೆ ಇಲ್ಲಿನ ಮಣೂರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರು ಭಾರಿ ಸಾಧನೆ ಮಾಡಿದ್ದಾರೆ. ಕಲಬುರಗಿ ನಗರದ ರಿಂಗ್ ರಸ್ತೆಯಲ್ಲಿರುವ ಮಣೂರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಆಸ್ಪತ್ರೆಯ ಮುಖ್ಯಸ್ಥ ಡಾ.ಫಾರೂಕ್ ಅಹ್ಮದ್ ಮಣೂರ್ ಅವರು ಮಾತನಾಡುತ್ತಾ, ಗುಲಿಯನ್ ಬ್ಯಾರೆ ಸಿಂಡ್ರೋಮ್ ರೋಗ ಅಪರೂಪದ ರೋಗವಾಗಿದ್ದು, ಆಸ್ಪತ್ರೆಯ ನುರಿತ ವೈದ್ಯರ ತಂಡದಿಂದ ಯಶಸ್ವಿ ಚಿಕಿತ್ಸೆ ನೀಡುವ ಮೂಲಕ ರೋಗಿಯ ಜೀವ ಉಳಿಸಲಾಗಿದೆ ಎಂದರು.

ಸಮರ್ಥ್ (14) ಇಂಥದ್ದೊಂದು ಸಮಸ್ಯೆಯಿಂದ 10 ದಿನಗಳ ಹಿಂದೆ ಆಸ್ಪತ್ರೆಗೆ ದಾಖಲಾದಾಗ ಆತನ ಕೈ–ಕಾಲು ಆಡಿಸುವ ಶಕ್ತಿ ಸಹ ಇರಲಿಲ್ಲ. ಮೇಲಾಗಿ ಉಸಿರಾಟ ಸಮಸ್ಯೆ ಸಹ ಕಾಡುತ್ತಿತ್ತು. ಹೀಗಾಗಿ ಯಕ್ಷಣ ವರ್ಷ ತಜ್ಞ ವೈದ್ಯರಾದ ಡಾ.ಶ್ರೀಕಾಂತ್, ಡಾ.ಮುಝುಮ್ಮಿಲ್ ಹಾಗೂ ಡಾ. ಸತೀಶ್ ಶರಣಪ್ಪ ಅವರನ್ನು ಒಳಗೊಂಡ ತಜ್ಞ ವೈದ್ಯರ ತಂಡ ಬಾಲಕನಿಗೆ ಯಶಸ್ವೀ ಚಿಕಿತ್ಸೆ ನೀಡುವಲ್ಲಿ ಸಫಲರಾಗಿದ್ದಾರೆ ಎಂದು ವಿವರಿಸಿದರು. ಬಾಲಕನ ಕುಟುಂಬಸ್ಥರು ಪಾರ್ಶ್ವವಾಯು/ಹಾವು ಕಡಿತ ಇರಬಹುದು ಎಂದು ಗೊಂದಲಕ್ಕೆ ಒಳಗಾಗಿ ಸುಮಾರು ಒಂದು ವಾರ ಅಲ್ಲಲ್ಲಿ ಚಿಕಿತ್ಸೆ ಕೊಡಿಸಿದ ನಂತರ ಮಣೂರ್ ಆಸ್ಪತ್ರೆಗೆ ಕರೆ ತಂದು ದಾಖಲಿಸಿದ್ದರು. ತಕ್ಷಣ ಇಡೀ ದೇಹದ ವೈದ್ಯಕೀಯ ತಪಾಸಣೆ ಬಳಿಕ ಗುಲಿಯನ್ ಬ್ಯಾರೆ ಸಿಂಡ್ರೋಮ್ ಸಮಸ್ಯೆ ಇರುವುದು ಪತ್ತೆಯಾಯಿತು ಎಂದು ಚಿಕಿತ್ಸಾ ವಿಧಾನದ ಕುರಿತು ಹೇಳಿದರು.ಈ ರೋಗದ ಪ್ರಮುಖ ಅಂಶವೆಂದರೆ, ಚಿಕಿತ್ಸೆ ದೊರಕುವುದು ವಿಳಂಬವಾದರೆ ರೋಗಿಯ ಒಂದೊಂದೇ ಅಂಗ ಸ್ವಾಧೀನ ಕಳೆದುಕೊಳ್ಳುತ್ತಾ ಹೋಗುತ್ತದೆ. ಹೀಗಾಗಿ ಸಾವಿನ ಸಾಧ್ಯತೆ ಹೆಚ್ಚಿರುತ್ತದೆ. ಈ ಕಾರಣಕ್ಕಾಗಿ ಆದಷ್ಟು ಬೇಗ ಚಿಕಿತ್ಸೆ ಪಡೆಯುವುದು ಅಗತ್ಯವಾಗಿದೆ ಎಂದು ಸಲಹೆ ನೀಡಿದರು. ನಂತರ ಆಸ್ಪತ್ರೆಯ ಜನರಲ್ ಮೆಡಿಸಿನ್ ವೈದ್ಯ ಡಾ. ಶ್ರೀಕಾಂತ.ಎ.ಕೆ ಅವರು ಮಾತನಾಡಿ, ರೋಗಿ ದಾಖಲಾದ ಸಮಯದಲ್ಲಿ ಯಾವುದೇ ರೀತಿಯ ಚಲನ ವಲನ ಇರಲ್ಲಿಲ್ಲ. ನಂತರ ಇಮ್ಯುನೊಗ್ಲೋಬಿನ್ ಚಿಕಿತ್ಸೆ ನೀಡಲಾಯಿತು. ಮೊದಲು ಕೆಲ ದಿನ ಚಿಕಿತ್ಸೆಗೂ ಸ್ಪಂದಿಸುತ್ತಿರಲಿಲ್ಲ, ನಂತರ ವೆಂಟಿಲೇಟರ್ ಗೆ ಸ್ಥಳಾಂತರ ಮಾಡಲಾಯಿತು ಎಂದು ಮಾಹಿತಿ ಹಂಚಿಕೊಂಡರು. ಅಗತ್ಯ ಚಿಕಿತ್ಸಾ ಕ್ರಮದ ಜೊತೆಗೆ ಫಿಸಿಯೊಥೆರಪಿ ಎದೆ, ಮೇಲಿನ ಅಂಗ, ಕೆಳಗಿನ ಅಂಗ ಮತ್ತು ಸಜ್ಜುಗೊಳಿಸುವಿಕೆ ವ್ಯಾಯಾಮಗಳನ್ನು ಮಾಡಿಸುವ ಮೂಲಕ ಬಾಲಕ ಚೇತರಿಸಿಕೊಳ್ಳಲು ಚಿಕಿತ್ಸೆ ನೀಡಲಾಯಿತು ಎಂದರು. ಈಗ ಬಾಲಕ ಸಂಪೂರ್ಣವಾಗಿ ಗುಣಮುಖನಾಗಿದ್ದು, ಪೊಷಕಾಂಶಯುಕ್ತ ಆಹಾರ ಕ್ರಮದ ಕುರಿತು ಬಾಲಕನ ಪೊಷಕರಿಗೆ ಸಲಹೆ ನೀಡಲಾಗಿದೆ ಎಂದರು. ತಜ್ಞ ವೈದ್ಯರಾದ ಡಾ.ಮುಝುಮ್ಮಿಲ್ ಅಹ್ಮದ್, ಡಾ.ಸತೀಶ್ ಶರಣಪ್ಪ ಮಾತನಾಡಿದರು. ಆಸ್ಪತ್ರೆಯ ತಜ್ಞ ವೈದ್ಯರು ಉಪಸ್ಥಿತರಿದ್ದರು.

# ವಕ್ಫ್ ಬೋರ್ಡ್ ಕಾಯ್ದೆ ತೊಂದರೆಗೆ ಬಿಜೆಪಿ ತಂಡ ರಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಾದ್ಯಂತ ವಕ್ಫ್ ಬೋರ್ಡ್ ಕಾಯ್ದೆಯಿಂದ ಆಗುತ್ತಿರುವ ತೊಂದರೆ ಹಾಗೂ ತೊಂದರೆಗೊಳಗಾದ ರೈತರ ಅಹವಾಲು ಕೇಳಲು ರಾಜ್ಯ ಬಿಜೆಪಿ ವತಿಯಿಂದ ತಂಡ ರಚಿಸಲಾಗಿದೆ. ಸಂಸದ ಗೋವಿಂದ ಕಾರಜೋಳ, ಶಾಸಕ ಹರೀಶ್ ಪೂಂಜಾ, ಶಾಸಕ ಮಹೇಶ ಟೆಂಗಿನಕಾಯಿ, ಮಾಜಿ ಎಂಎಲ್ಸಿ ಅರುಣ ಶಹಾಪುರ, ಬಿಜೆಪಿ ರೈತಮೋರ್ಚಾ ರಾಜ್ಯ ಪ್ರ.ಕಾರ್ಯದರ್ಶಿ ಕಲ್ಮರುಡಪ್ಪ ತಂಡವು ಅ.29 ರಂದು ಜಿಲ್ಲೆಗೆ ಭೇಟಿ ನೀಡಲಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಯಶಸ್ಸಿನತ್ತ ಸಾಗಬೇಕು: ಅಲ್ತಾಫ್ ಹುಸೇನ್



ಕಲಬುರಗಿ:ಅ.27:ಓದುವದು, ಬರೆಯುವುದು, ಆಲಿಸುವುದು, ಕಲಿಕೆಯ ಆಸಕ್ತಿ, ಪ್ರದರ್ಶಿಸುವಿಕೆಯ ವೈಶಿಷ್ಟತೆ ಈ ಐದು ಕೌಶಲ್ಯಗಳು ಯಶಸ್ಸಿನ ಮಂತ್ರಗಳಾಗಿವೆ. ವಿದ್ಯಾರ್ಥಿಗಳು ಯಶಸ್ಸಿನತ್ತ ಸಾಗಬೇಕು ಎಂದು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಕೆಮಿಕಲ್ ಇಂಜಿನಿಯರ್ಸ್ ಹೈದರಾಬಾದ್ ಪ್ರಾದೇಶಿಕ ಕೇಂದ್ರ ಅಧ್ಯಕ್ಷ ಅಲ್ತಾಫ್ ಹುಸೇನ್ ಅಭಿಪ್ರಾಯ ಪಟ್ಟರು.

ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪಾ ಸಭಾ ಮಂಟಪದಲ್ಲಿ ಶರಣಬಸವ ವಿಶ್ವವಿದ್ಯಾಲಯ ಹಾಗೂ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಕೆಮಿಕಲ್ ಇಂಜಿನಿಯರ್ಸ್ ಹೈದರಾಬಾದ್ ಪ್ರಾದೇಶಿಕ ಕೇಂದ್ರ ಭಾನುವಾರ ಆಯೋಜಿಸಿದ ವಿದ್ಯಾರ್ಥಿ ಅಧ್ಯಾಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಲಿಕೆಯಲ್ಲಿ ಪಠ್ಯ, ಪಠ್ಯೇತರ ಹಾಗೂ ಇತರೆ ಪಠ್ಯೇತರ ಕಲಿಕೆಯತ್ತ ವಿದ್ಯಾರ್ಥಿಗಳು ಗಮನವಹಿಸಬೇಕು. ಇಂತಹ ಕಲಿಕೆಯಿಂದ ಮಾತ್ರ ವ್ಯಕ್ತಿತ್ವ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು. ನ್ಯೂ ಎಜುಕೇಶನ್ ಪಾಲಿಸಿಯಿಂದ ಇಂತಹ ಕಲಿಕೆ ಅವಕಾಶ ಸಿಕ್ಕಿದೆ ಎಂದರು.

ಈ ಅಧ್ಯಯನದಿಂದ ವಿದ್ಯಾರ್ಥಿಗಳು ಪ್ರಾಯೋಗಿಕವಾಗಿ ಹೆಚ್ಚು ಹೆಚ್ಚು ಕಲಿಯಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಈ ಮೂಲಕ ಅಪ್ರೆಂಟಿಸ್, ಇಂಟರ್‌ಶಿಪ್ ಹಾಗೂ ಇತರೇ ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತದೆ ಮತ್ತು ಸಂಶೋಧನಾತ್ಮಕ ಕ್ರೀಯಾತ್ಮಕ ಮನಸ್ಥಿತಿ ಅಭಿವೃದ್ಧಿಗೊಳಿಸಿಕೊಳ್ಳಬಹುದು ಎಂದರು.

ಈ ಕಾರ್ಯಕ್ರಮದ ಇನ್ನೋರ್ವ ಅಥಿಯಾಗಿ ಭಾಗವಹಿಸಿದ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಕೆಮಿಕಲ್ ಇಂಜಿನಿಯರ್ಸ್ ಹೈದರಾಬಾದ್ ಪ್ರಾದೇಶಿಕ ಕೇಂದ್ರದ ಕಾರ್ಯದರ್ಶಿ ಸಿ.ಎಚ್. ಅಪ್ಪಾರಾವ ಮಾತನಾಡಿ, ವಿದ್ಯಾರ್ಥಿಗಳು ಪ್ರಾಯೋಗಿಕವಾಗಿ ಕಲಿಯಬೇಕು ಮತ್ತು ಕಲಿತ ವಿಷಯವನ್ನು ಹೇಗೆ ಅನ್ವಯಿಸಿಕೊಳ್ಳಬೇಕು ಎನ್ನುವ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದರು.

ವಿವಿ ಪ್ರಾಧ್ಯಾಪಕರಾದ ಡಾ. ಬಸವರಾಜ ಶ್ರೀಗಿರಿ ಶರಣಬಸವ ವಿಶ್ವವಿದ್ಯಾಲಯದಲ್ಲಿ ಎನರ್ಜಿ ಇಂಜಿನಿಯರಿಂಗ್ ವಿಭಾಗ ಆರಂಭವಾಗಿದ್ದು 2021ರಲ್ಲಿ, ಇಷ್ಟು ಕಡಿಮೆ ಅವಧಿಯಲ್ಲಿ 150 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ಅಭ್ಯಾಸ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ಜಾಗತೀಕ ಸವಾಲುಗಳ ಬಗ್ಗೆ ಅಧ್ಯಯನ ಮಾಡಿ, ಪರಿಹಾರ ಕಂಡುಕೊಳ್ಳುವತ್ತ ಕಲಿಕೆಯಲ್ಲಿ ನಿರಂತರತೆ ಕಾಯ್ದುಕೊಳ್ಳುವ ಮೂಲಕ ಪರಿಪೂರ್ಣ ವ್ಯಕ್ತಿತ್ವ ಹೊಂದುವರು ಎಂದರು.ವಿವಿ ಕುಲಸಚಿವ ಡಾ. ಎಸ್ ಜಿ. ಡೊಳ್ಳೇಗೌಡರ ಮಾತನಾಡಿ, ವಿದ್ಯಾರ್ಥಿಗಳು ಹಲವಾರು ಕ್ಷೇತ್ರದ ಕಲಿಕೆಯ ಮುಖಾಂತರ ಉತ್ತಮ ಪಾಠ ಪಡೆದುಕೊಳ್ಳಬಲ್ಲರು. ಈ ಜಗತ್ತಿನ ಭವಿಷ್ಯ ನಿಮ್ಮ ಕೈಯಲಿದೆ. ಹೀಗಾಗಿ ಉತ್ತಮ ವ್ಯಕ್ತಿತ್ವವನ್ನು ನಿರ್ಮಿಸಿಕೊಳ್ಳಿ ಎಂದರು.

ವೇದಿಕೆಯಲ್ಲಿ ವಿವಿ ಕುಲಪತಿ ಡಾ. ಅನೀಲಕುಮಾರ ಜಿ. ಬಿಡವೆ, ಕುಲಸಚಿವ ಮೌಲ್ಯಮಾಪನ ಡಾ. ಎಸ.ಎಸ್.ಹೊನ್ನಳ್ಳಿ, ಎಂಜನಿಯರಿಂಗ್ ವಿಭಾಗದ ಡೀನ ಡಾ. ಶಿವಕುಮಾರ ಜವಳಗಿ, ಪ್ರೊ. ವಿಕಾಸ ಕೆ. ಅಣಕಲ್ ಇತರರು ಇದ್ದರು.

# ಬಾಪೂಜಿ ತೊಗಲು ಬೊಂಬೆ ಪ್ರದರ್ಶನ:ಗಾಂಧಿ ಕಂಡ ಭಾರತ ಕಟ್ಟಲು ಬಿ.ಆರ್ ಪಾಟೀಲ್ ಕರೆ



ಕಲಬುರಗಿ: ಮಹಾತ್ಮ ಗಾಂಧೀಜಿ ಅವರನ್ನೂ ಜಗತ್ತಿನ ಇತರೆ ದೇಶಗಳು ಗೌರವಿಸಿ ಪೂಜಿಸುತ್ತಾರೆ. ಆದರೆ, ಸ್ವಂತ ದೇಶದ ಭಾರತದಲ್ಲಿ ಗಾಂಧೀಜಿಯ ಚಾರಿತ್ರ್ಯ ಹರಣ ಮಾಡುತ್ತಿರುವುದು ನೋವಿನ ಸಂಗತಿಯಾಗಿದೆ ಎಂದು ಮುಖ್ಯಮಂತ್ರಿಗಳ ಸಲಹೆಗಾರ ಬಿ.ಆರ್ ಪಾಟೀಲ್ ವಿಷಾದ ವ್ಯಕ್ತಪಡಿಸುತ್ತಾ ಬಾಪು ಕಂಡ ಬಾರತ ಕಟ್ಟಲು ಕರೆ ನೀಡಿದರು.

ಇಲ್ಲಿನ ಡಾ. ಎಸ್. ಎಂ. ಪಂಡಿತ್ ರಂಗಮಂದಿರದಲ್ಲಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕಲಬುರಗಿ ರಂಗಾಯಣದಿಂದ ಗಾಂಧಿ ಜಯಂತಿ ಪ್ರಯುಕ್ತ ಆಯೋಜಿಸಿದ "ಬಾಪೂಜಿ" ತೊಗಲು ಬೊಂಬೆ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಸವಣ್ಣನವರ ಬಗ್ಗೆ ಗಾಂಧೀಜಿಗೆ ಸಾಕಷ್ಟು ಒಲವಿತ್ತು. ಬಸವಣ್ಣ ಹೇಳಿದ್ದನ್ನೇ ಗಾಂಧೀಜಿ ಅವರು ತಮ್ಮ ಅಹಿಂಸಾ ತತ್ವ ಸಾರುವ ಮೂಲಕ ಗಾಂಧೀಜಿ ಜಗತ್ತಿನ 186ಕ್ಕೂ ಹೆಚ್ಚಿನ ದೇಶಗಳಿಗೆ ಮಾದರಿಯಾಗಿದ್ದಾರೆ. ಗಾಂಧಿ ಕುರಿತು ಅನೇಕ ಲೇಖನ, ಕಾದಂಬರಿ, ಆತ್ಮಚರಿತ್ರೆ ಓದಿದ್ದೇವೆ. ಆದರೆ, ಗಾಂಧೀಜಿಯನ್ನು ಮೀರಿಸುವ ಎರಡನೇ ಶಕ್ತಿ ಇಂದಿಗೂ ಜಗತ್ತಿನಲ್ಲಿ ಹುಟ್ಟಿಲ್ಲ ಎಂದು ಹೇಳಿದರು.

ಕರ್ನಾಟಕದ ಬೆಳಗಾವಿಗೆ ಗಾಂಧೀಜಿ ಬಂದು ಕಾಂಗ್ರೆಸ್ ಅಧಿವೇಶನ ನಡೆಸಿ ಇಂದಿಗೆ 100 ವರ್ಷ ಸಂದಿವೆ. ಅದರ ಸವಿ ನೆನಪಿನ ಭಾಗವಾಗಿ ರಾಜ್ಯ ಸರ್ಕಾರ ಮಹಾತ್ಮ ಗಾಂಧೀಜಿ ಅವರ ಜೀವನ, ಆದರ್ಶ ಎಲ್ಲೆಡೆ ಪ್ರಚಾರ ಪಡಿಸುವ ನಿಟ್ಟಿನಲ್ಲಿ ವರ್ಷ ಪೂರ್ತಿ ಅನೇಕ ಕಾರ್ಯಕ್ರಮ ರೂಪಿಸಿದೆ. ನಾವೆಲ್ಲರೂ ಗಾಂಧಿ ಭಾರತ ಕಟ್ಟುವ ಸಂಕಲ್ಪ ಮಾಡೋಣ ಎಂದು ಕರೆ ಕೊಟ್ಟರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹಾಗೂ ಹಿರಿಯ ಸಾಹಿತಿ ಪ್ರೊ. ಎಸ್.ಜಿ. ಸಿದ್ದರಾಮಯ್ಯ ಮಾತನಾಡಿ, ಇಂದಿನ ಯುವ ಪೀಳಿಗೆಗೆ ಗಾಂಧೀಜಿ ಅವರ ಜೀವನ ಸ್ಫೂರ್ತಿಯಾಗಬೇಕು. ಗಾಂಧೀಜಿ ಅವರ ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಬೇಕು ಎಂದು ಕರೆ ನೀಡಿದರು.ಸರಳತೆಬದುಕುನಮ್ಮದಾಗಬೇಕು:

ಕಾರ್ಯಕ್ರಮದಲ್ಲಿ ಭಾಗವಹಿಸಿದ ಹಿರಿಯ ಲೇಖಕಿ ಆಶಾದೇವಿ ಮಾತನಾಡಿ, ಗಾಂಧಿ ಹೇಳಿದ ಸರಳ ಸ್ವಾವಲಂಬಿ ಬದುಕಿಗೆ ನಾವು ಮರಳಬೇಕಿದೆ. ಗಾಂಧಿಯ ಆದರ್ಶಗಳಿಂದ ನಾಗರೀಕತೆ ಉಳಿಯಲು ಸಾಧ್ಯ. ಗಾಂಧಿ ಕಂಡಂತೆ ಹೆಣ್ಣು ಮಕ್ಕಳನ್ನೂ ಮುನ್ನಲೆಗೆ ತರಬೇಕಾಗಿದೆ. ಗಾಂಧೀಜಿಯನ್ನು ಇವ ನಮ್ಮವ ಎಂದು ಒಪ್ಪುವ ಮನೋಭಾವನೆ ಎಲ್ಲರು ಬೆಳೆಸಿಕೊಳ್ಳಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಲಬುರಗಿ ರಂಗಾಯಣ ನಿರ್ದೇಶಕಿ ಡಾ.ಸುಜಾತಾ ಜಂಗಮಶೆಟ್ಟಿ, ಗ್ರಾಮೀಣ, ಹೋಬಳಿ ಮಟ್ಟಕ್ಕೂ ಕಲಬುರಗಿ ರಂಗಾಯಣ ತೆಗೆದುಕೊಂಡು ಹೋಗುತ್ತೇವೆ. ಬಸವಣ್ಣ, ಅಂಬೇಡ್ಕರ್, ಗಾಂಧೀಜಿ ಅವರ ತತ್ವಗಳನ್ನು ಯುವ ಪೀಳಿಗೆಗೆ ತಲುಪಿಸುವ ಕೆಲಸ ರಂಗಾಯಣ ಮಾಡಲಿದೆ ಎಂದು ತಿಳಿಸಿದರು.ಕಲಬುರಗಿ ರಂಗಾಯಣದ ಆಡಳಿತಾಧಿಕಾರಿ ಜಗದೀಶ್ವರಿ ನಾಸಿ ಸ್ವಾಗತಿಸಿ ಪ್ರಾಸ್ತವಿಕವಾಗಿ ಮಾತನಾಡಿದರು. ಸಿದ್ದಾರ್ಥ ಚಿಮ್ಮಾಇದ್ದಾಯಿ ತಂಡದಿಂದ ಗಾಂಧೀಜಿ ಕುರಿತು ಗೀತ ಗಾಯನ ಸುಧೆ ಹರಿತು

ತದನಂತರ ಬಳ್ಳಾರಿ ಶ್ರೀರಾಮಾಂಜನೇಯ ತೊಗಲು ಬೊಂಬೆ ಮೇಳ ಟ್ರಸ್ಟ್‌ನ ಬೆಳಗಲ್ಲು ಹನುಮಂತ ಅವರು ಬಳ್ಳಾರಿಯ ನಾಡೋಜ ಬೆಳಗಲ್ಲು ವೀರಣ್ಣ ಅವರ ನಿರ್ದೇಶನದ ತೊಗಲು ಬೊಂಬೆ ಆಟ ಪ್ರಸ್ತುತ ಪಡಿಸಿದರು. ಕಲಬುರಗಿಯ ಕಪಿಲ ಚಕ್ರವರ್ತಿ ನಿರೂಪಣೆ ಮಾಡಿದರು.

# ಮಾಹಿತಿ ಹಕ್ಕು ನಿಯಮದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು



ಕಲಬುರಗಿ: ಕರ್ನಾಟಕ ಮಾಹಿತಿ ಆಯೋಗ ಜಾರಿಗೆ ಬಂದಾಗಿನಿಂದ ಬ್ರಷ್ಟಾಚಾರಕ್ಕೆ ಒಂದಿಷ್ಟು ಕಡಿವಾಣ ಬಿದ್ದಿದೆ ಇದರ ಬಗ್ಗೆ ಇನ್ನಷ್ಟು ಜನರಲ್ಲಿ ಅರಿವು ಮೂಡಿಸಬೇಕು ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತ ರವೀಂದ್ರ ಗುರುನಾಥ ಧಾಕಪ್ಪ ಅವರು ಹೇಳಿದರು.

ರವಿವಾರದಂದು ಕಲಬುರಗಿಯ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ ಕರ್ನಾಟಕ ಮಾಹಿತಿ ಆಯೋಗ,ಕಲಬುರಗಿ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಮಾಹಿತಿಹಕ್ಕುದಿನಾಚರಣೆಕಾರ್ಯಕ್ರಮದಲ್ಲಿ ಗಣ್ಯರಿಗೆ ಸಸಿ ನೀಡಿ ಮಾತನಾಡಿದ ಅವರು ಮಾಹಿತಿ ಹಕ್ಕು ದಿನಚಾರಣೆ ಕಲ್ಯಾಣ ಕರ್ನಾಟಕಪ್ರದೇಶದಲ್ಲಿಹಮ್ಮಿಕೊಂಡಿರುವುದು ತುಂಬ ಸಂತೋಷ ತಂದಿದ್ದು, ಮಾಹಿತಿ ಆಯೋಗ ಪೀಠ ಸ್ಥಾಪನೆಯಿಂದ ಈ ಏಳು ಜಿಲ್ಲೆಗಳಿಗೆ ಇದರ ಪ್ರಯೋಜನವಾಗಲಿದೆ

ಈ ಪೀಠಕ್ಕೆ ಶಾಶ್ವತ ಕಟ್ಟಡ ಒದಗಿಸುವಂತೆ ಸರಕಾರದ ಮೇಲೆ ಪ್ರಭಾವ ಬಿರುವ ಕಾರ್ಯ ಮಾಡಬೇಕು ಎಂದು ಹೇಳಿದರು.2019ರಲ್ಲಿ ಕಲಬುರಗಿಯಲ್ಲಿಪೀಠವುಸ್ಥಾಪನೆಯಾಯಿತು ನಾನು ಬಂದ ಮೇಲೆ 10.000 ಇದ್ದಂತಹ ಕೇಸಗಳನ್ನ 15 ತಿಂಗಳಲ್ಲಿ 3.000 ಪ್ರಕರಣಗಳ ಇತ್ಯಾರ್ಥ ಮಾಡಿದ್ದೆನೆ ಕಲಬುರಗಿ ಪೀಠದಲ್ಲಿ ಹುದ್ದೆಗಳ ಕೊರತೆಯಿದೆ 371 ಜೆ ಅಡಿಯಲ್ಲಿ ಹುದ್ದೆಗಳನ್ನ ಭರ್ತಿ ಮಾಡಬೇಕಾಗಿದೆ. ಈ ಹುದ್ದೆಗಳನ್ನ ತುಂಬಿದಲ್ಲಿ ಕೆಲಸ ನಿರ್ವಹಿಸುವಲ್ಲಿ ಸಹಕಾರ ಆಗುತ್ತದೆ. ಕರ್ನಾಟಕದಲ್ಲಿ 11 ಮಾಹಿತಿ ಹಕ್ಕು ಪೀಠಗಳಿದ್ದು ಅದರಲ್ಲಿ ಒಂದು ಬೆಳಗಾಂವ ಇನ್ನೊಂದು ಕಲಬುರಗಿಯಲ್ಲಿದೆ ಎಂದು ಹೇಳಿದರು. ಅತಿಥಿಗಳಾಗಿ ಹಿರಿಯ ಸಾಮಾಜಿಕ ಕಾರ್ಯಕರ್ತ ಶ್ರೀನಿವಾಸ ಸಿರನೂರಕರ್ ಮಾತನಾಡಿ,ಮಾಹಿತಿ ಹಕ್ಕು ಕಾಯ್ದೆಯಲ್ಲಿಪರಿಣಾಮಕಾರಿಅನುಷ್ಠಾನದಲ್ಲಿ ಮಾಧ್ಯಮದ ಪಾತ್ರ ಬಹಳ ಮುಖ್ಯವಾಗಿದೆ ಓದುಗರ ವೀಕ್ಷಕರ ಕೇಳುಗರ ಪರವಾಗಿ ಮಾಧ್ಯಮ ಕಾರ್ಯಮಾಡಬೇಕಾಗಿದೆ ಎಂದು ಅವರು ಹೇಳಿದರು. ಕರ್ನಾಟಕ ರಾಜ್ಯ ರಸ್ತೆ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಮುಖ್ಯ ಇಂಜಿನಿಯರ್ ಜಗನಾಥ ಹಂಲಿಗೆ ಮಾತನಾಡಿ, ಕಲಬುರಗಿ ಪೀಠವು ಈ ಭಾಗದ ಜನರಿಗೆ ಅನುಕೂಲವಾಗಲಿ ಸಾರ್ವಜನಿಕರು ಈ ಇದರ ಒಂದು ಸದುಉಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಗ್ರಾಹಕರ ವೇದಿಕೆಯ ಸಂಘದ ಅಧ್ಯಕ್ಷೆ ಮಾಲತಿ ರೇಷ್ಮೆ ಮಾತನಾಡಿ, ಹೈದ್ರಾಬಾದ್ ಕರ್ನಾಟಕ ಎಂಬ ಪದನಾಮ ಬದಲು ಕಲ್ಯಾಣ ಕರ್ನಾಟಕ ಎಂಬ ಹೆಸರಿನಲ್ಲಿ ದಾಪುಗಾಲು ಇಡುತ್ತಿದ್ದೇವೆ. ಗ್ರಾಹಕರು ಬೆಂಗಳೂರಿಗೆ ಹೋಗುವುದರಿಂದ ತೊಂದರೆ ಅನುಭವಿಸುವಂತಾಗಿದೆ ಗ್ರಾಹಕರ ವೇದಿಕೆ, ಸಂಚಾರಿ ಪೀಠ, ಕೋರ್ಟ್, ಹೈಕೋರ್ಟ್ ಬಹಳ ಇಲಾಖೆಗಳನ್ನು ಇಲ್ಲಿಗೆ ತಂದಿದ್ದೆವೆ ಇದರಿಂದ ಈ ಭಾಗದ ಜನರು ಇದರಸದುಉಪಯೋಗಪಡಿದುಕೊಳ್ಳಬೇಕು ಎಂದು ಹೇಳಿದರು. ಕಲ್ಯಾಣ ಕರ್ನಾಟಕ ಪರಿಸರ ಪ್ರಜ್ಞೆ ಹಾಗೂ ಸಂರಕ್ಷಣೆ ಸಂಘಟನೆಯ ಅಧ್ಯಕ್ಷ ದೀಪಕ ಗಾಲಾ ಮಾತನಾಡಿ, ಭಾರತ ದೇಶದಲ್ಲಿ ಭ್ರಷ್ಟಚಾರ ಮುಕ್ತಮಾಡಲೆಂದು ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ತರಲಾಗಿದೆ. ಮೊಟ್ಟ ಮೊದಲ ಬಾರಿಗೆ ಸ್ವಿಡನ್ ದೇಶದಲ್ಲಿ ಜಾರಿಗೆ ಬಂದಿದೆ ನಮ್ಮ ದೇಶದಲ್ಲಿ ಮೊದಲ ಬಾರಿಗೆ ತಮಿಳು ನಾಡಿನಲ್ಲಿ ಜಾರಿಗೆ ತರಲಾಯಿತು. ನಂತರ ಕರ್ನಾಟಕದಲ್ಲಿ 2005 ರಲ್ಲಿ ಜಾರಿಗೆ ತರಲಾಯಿತು.ಈ ಕಾಯ್ದೆಯ ಬಗ್ಗೆ ಸಾಕಷ್ಟು ಹಳ್ಳಿಯ ಜನರಿಗೆ ಗೊತ್ತಿಲ್ಲ ಇದರ ಬಗ್ಗೆ ಜಾಗೃತಿ ಮೂಡಿಸುವಂತಹ ಕೆಲಸ ಮಾಡಬೇಕಾಗಿದೆ. ಭ್ರಷ್ಟಚಾರವನ್ನು ತಡೆಯಲು ಇದೊಂದು ಅಸ್ತ್ರವಾಗಿದೆ ಎಂದು ಹೇಳಿದರು. ಎ.ಪಿ.ಸಿ.ಆರ್.ಸ್ಟೇಟ್ ಆರ್ ಟಿ ಐ ಕೋರ್ಡಿನೇಟರ್ ಶೇಖ ಶಫಿ ಅಹಮದ್ ಅವರು 4(1)ಎ,4(1)ಬಿ ಹಲವಾರು ಕಾಯ್ದೆಗಳ ಅನುಷ್ಠಾನ ಕುರಿತು ಸಂಕ್ಷಿಪ್ತವಾದ ವಿವರಣೆ ನೀಡಿದರು. ಕಾರ್ಯಕ್ರಮದ ನಂತರ ಹದಿನೈದು ನಿಮಿಷಗಳ ಕಾಲ ಮಾಹಿತಿ ಹಕ್ಕಗಳ ಬಗ್ಗೆ ತಮ್ಮ ಅನಿಸಿಕೆಗಳ ಬಗ್ಗೆ ಮಾಹಿತಿ ಆಯುಕ್ತರಿಂದ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ಸಂಘಟನೆಗಳ ಅಧ್ಯಕ್ಷರು ಆರ್.ಟಿ.ಐ. ಕಾರ್ಯಕರ್ತರು ಭಾಗವಹಿಸಿದ್ದರು.

# ಅ. 30 ರಿಂದ ರಾಜ್ಯೋತ್ಸವದ ಕನ್ನಡ ಸಂಭ್ರಮ–2024




ಕಲಬುರಗಿ: ಕನ್ನಡ ಭಾಷೆಯನ್ನು ಕೇವಲ ನವೆಂಬರಗೆ ಸೀಮಿತಗೊಳಿಸದೆ ಕವಿ ನಿಸಾರ್ ಅಹ್ಮದ್ ಅವರ ನಿತ್ಯೋತ್ಸವದಂತೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕ್ರಮಗಳೂ ಸಹ ನಿತ್ಯವಾಗಿರುವಂತೆ, ಕನ್ನಡ ನಾಡು–ನುಡಿ, ಭಾಷೆ ಬಗ್ಗೆ ಅಭಿಮಾನ ಬೆಳೆಸಿಕೊಳ್ಳುವ ಅನೇಕ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬರಲಾಗುತ್ತಿದೆ. ಕರ್ನಾಟಕ ರಾಜ್ಯೋತ್ಸವವನ್ನು ಈ ಬಾರಿ ವಿಭಿನ್ನ ಪ್ರಯೋಗದೊಂದಿಗೆ ವಿಶೇಷತೆಗಳಿಂದ ಕೂಡಿದ ಕಾರ್ಯಕ್ರಮಗಳನ್ನು ನವೆಂಬರ್ ತಿಂಗಳಾದ್ಯಂತ ಹಮ್ಮಿಕೊಳ್ಳಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ತಿಳಿಸಿದರು. ನಗರದ ಕನ್ನಡ ಭವನದಲ್ಲಿ ರವಿವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಕಾರ್ಯಕ್ರಮಗಳ ಮಾಹಿತಿ ನೀಡಿದ ತೇಗಲತಿಪ್ಪಿ, ಇಂಥ ಕಾರ್ಯಕ್ರಮಗಳು ರೂಪಿಸುವ ಮೂಲಕ ಕನ್ನಡ ರಾಜ್ಯೋತ್ಸವದ ದೀಪ ಹಚ್ಚುವ ಮೂಲಕ ಜಿಲ್ಲೆಯಾದ್ಯಂತ ಕನ್ನಡ ಕ್ರಾಂತಿ ಮೊಳಗಿಸುವ ಮಹತ್ತರ ಕಾರ್ಯ ನಿರಂತರವಾಗಿ ಪರಿಷತ್ತು ಮಾಡುತ್ತಿದೆ ಎಂದು ಅವರು ವಿವರಿಸಿದರು.

ಅ.30 ರಂದು ಬೆಳಗ್ಗೆ 10.15 ಕ್ಕೆ ಜಗತ್ ವೃತ್ತದಿಂದ ಕನ್ನಡ ಭವನದ ವರೆಗೆ ನಡೆಯುವ ಕನ್ನಡ ಜಾಗೃತಿ ಜಾಥಾ ಕ್ಕೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಚಾಲನೆ ನೀಡಲಿದ್ದು, ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್ ಡಿ. ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ನವೆಂಬರ್ 3 ರಂದು ಬೆಳಗ್ಗೆ 10.45 ನಗರದ ಕನ್ನಡ ಭವನದಲ್ಲಿ ವಿವಿಧ ಕ್ಷೇತ್ರದ ಹದಿನಾರು ಜನ ಸಾಧಕರಿಗೆ ಜಿಲ್ಲಾ ಮಟ್ಟದ ರಾಜ್ಯೋತ್ಸವ ಗೌರವ ಪುರಸ್ಕಾರ ಆಯೋಜಿಸಲಾಗಿದ್ದು, ಕರ್ನಾಟಕ ಮಾಹಿತಿ ಹಕ್ಕು ಆಯೋಗದ ಆಯುಕ್ತರಾದ ರವೀಂದ್ರ ಢಾಕಪ್ಪ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಹಿರಿಯ ಲೇಖಕಿ ಡಾ. ಇಂದುಮತಿ ಪಿ ಪಾಟೀಲ ಉಪಸ್ಥಿತರಿರುವರು. ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಅಧ್ಯಕ್ಷತೆ ವಹಿಸಲಿದ್ದಾರೆ.

12 ರ ಬೆಳಗ್ಗೆ 10.45 ಕ್ಕೆ ನಗರದ ಎಸ್ ಎಸ್ ತೆಗನೂರ ಪದವಿ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾದ ಕನ್ನಡ ಸಾಹಿತ್ಯಕ್ಕೆ ವಚನಕಾರರ ಕೊಡುಗೆ ಕುರಿತು ವಿಚಾರಗೋಷ್ಠಿಯನ್ನು ಹಮ್ಮಿಕೊಳ್ಳಲಾಗಿದೆ. ಮೇಯರ್ ಯಲ್ಲಪ್ಪ ನಾಯ್ಕೋಡಿ ಸಮಾರಂಭ ಉದ್ಘಾಟಿಸಲಿದ್ದು, ಶರಣ ಚಿಂತಕ ಪ್ರೊ. ಸಂಜಯ ಮಾಕಲ್ ವಿಚಾರ ಮಂಡನೆ ಮಾಡಲಿದ್ದಾರೆ. ಕಾಲೇಜಿನ ಪ್ರಾಂಶುಪಾಲರಾದ ಡಾ. ಜ್ಯೋತಿ ತೆಗನೂರ ಅಧ್ಯಕ್ಷತೆ ವಹಿಸಲಿದ್ದಾರೆ. 16 ರಂದು ಸಾಯಂಕಾಲ 5.30 ಕ್ಕೆ ಕನ್ನಡ ಭವನದಲ್ಲಿನ ಸಾಹಿತ್ಯ ಮಂಟಪದಲ್ಲಿ ಖ್ಯಾತ ಹಾಸ್ಯ ಕಲಾವಿದರಾದ ಗುಂಡಣ್ಣ ಡಿಗ್ಗಿ, ಶರಣು ದೇಸಾಯಿ, ಜ್ಯೂ. ಡಾ. ರಾಜಕುಮಾರ ಖ್ಯಾತಿಯ ಹೇಮಂತ್ ಮಾಲಗತ್ತಿ, ಜ್ಯೂ. ರವಿ ಬೆಳಗೆರೆ ಖ್ಯಾತಿಯ ಹಣಮಂತ ಶೇರಿ ಅವರಿಂದ ರಾಜ್ಯೋತ್ಸವಕ್ಕೆ ಹಾಸ್ಯದ ಹಬ್ಬ ಎಂಬ ನಕ್ಕಾಂವ ಗೆದ್ದಾಂವ ಎಂಬ ವಿಶೇಷ ರಸಮಂಜರಿ ಕಾರ್ಯಕ್ರಮ ಏರ್ಪಡಿಸಲಾಗಿದೆ. ಕಲಬುರಗಿ ಸಹಾಯಕ ಆಯುಕ್ತರಾದ ಸಾಹಿತ್ಯ ಎಂ ಆಲದಕಟ್ಟಿ ಅವರು ಉದ್ಘಾಟಕರಾಗಿ ಆಗಮಿಸಲಿದ್ದಾರೆ. 20 ರಂದು ಬೆಳಗ್ಗೆ 10.45 ಕ್ಕೆ ಕನ್ನಡ ಭವನದಲ್ಲಿ ವಿದ್ಯಾರ್ಥಿಗಳಿಗೆ ಸ್ಫೂರ್ತಿಯ ಸ್ಪರ್ಧೆಯ ಮೂಲಕ ಪ್ರಬಂಧ ಸ್ಪರ್ಧೆ ಹಾಗೂ ರಸ ಪ್ರಶ್ನೆ ಕಾರ್ಯಕ್ರಮಗಳು ಜರುಗಲಿವೆ. ಕೆ.ಎ. ಎಸ್. ಅಧಿಕಾರಿ ಆಶಪ್ಪ ಪಿ ಅವರು ಉದ್ಘಾಟಿಸಲಿದ್ದಾರೆ. 26 ರ ಬೆಳಗ್ಗೆ 10.45 ಕ್ಕೆ ಮಕ್ಕಳೋತ್ಸವ ಎಂಬ ಚಿಣ್ಣರ ಸಂಭ್ರಮವನ್ನು ಏರ್ಪಡಿಸಲಾಗಿದ್ದು, ಜಿಲ್ಲೆಯ ವಿವಿಧ ಶಾಲಾ ಕಾಲೇಜುಗಳ ಮಕ್ಕಳು ಭಾಗವಹಿಸಲಿದ್ದಾರೆ. ಡಿಸಿಸಿ ಬ್ಯಾಂಕಿನ ಅಧ್ಯಕ್ಷ ಸೋಮಶೇಖರ ಗೋನಾಯಕ್ ಉದ್ಘಾಟಕರಾಗಿ ಆಗಮಿಸಲಿದ್ದಾರೆ. 29 ರ ಬೆಳಗ್ಗೆ 10.45 ಕ್ಕೆ ನಗರದ ಕನ್ನಡ ಭವನದಲ್ಲಿನ ಕಲಾ ಸೌಧದಲ್ಲಿ ಒಂದು ವಾರದ ವರೆಗೆ ಮಹಿಳಾ ಚಿತ್ರಕಲಾ ಪ್ರದರ್ಶನ ಏರ್ಪಡಿಸಲಾಗಿದೆ. ಉತ್ತರ ಮತಕ್ಷೇತ್ರದ ಶಾಸಕಿ ಖನೀಜ್ ಫಾತಿಮಾ ಚಾಲನೆ ಕೊಡಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ಉಪಸ್ಥಿತರಿರುವರು.ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಸಾಪ ದ ಗೌರವ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ, ಸಿದ್ಧಲಿಂಗ ಬಾಳಿ, ರವೀಂದ್ರಕುಮಾರ ಭಂಟನಳ್ಳಿ, ರಾಜೇಂದ್ರ ಮಾಡಬೂಳ, ಧರ್ಮರಾಜ ಜವಳಿ, ರಮೇಶ ಡಿ ಬಡಿಗೇರ, ಇತರರಿದ್ದರು.

# ಪಾಕ್‌ನ ಪ್ರಮುಖ ಮಾದಕವಸ್ತು ಕಳ್ಳಸಾಗಣೆ ಜಾಲ ಭೇದಿಸಿದ ಪೊಲೀಸರು; 105 ಕೆಜಿ ಹೆರಾಯಿನ್ ವಶ, ಇಬ್ಬರ ಬಂಧನ

ಚಂಡೀಗಢ: ಪಂಜಾಬ್ ಪೊಲೀಸರು ಗಡಿಯಾಚೆಗಿನ ಕಳ್ಳಸಾಗಣೆ ಗ್ಯಾಂಗ್ ಅನ್ನು ಭೇದಿಸಿದ್ದಾರೆ. ಟರ್ಕಿ ಮೂಲದ ಮಾದಕವಸ್ತು ಕಳ್ಳಸಾಗಣೆದಾರ ನವಪ್ರೀತ್ ಸಿಂಗ್ ಅಲಿಯಾಸ್ ನವ್ ಭುಲ್ಲರ್‌ನ ಇಬ್ಬರು ಸಹಚರರನ್ನು ಬಂಧಿಸಿದ್ದಾರೆ. ಈ ಕಾರ್ಯಾಚರಣೆಯಲ್ಲಿ, 105 ಕೆಜಿ ಹೆರಾಯಿನ್, 31.93 ಕೆಜಿ ಕೆಫೀನ್ ಅನ್‌ಹೈಡ್ರಸ್, 17 ಕೆಜಿ ಡೆಕ್ಸ್ಟ್ರೋಮೆಥಾರ್ಫಾನ್ (ಡಿಎಂಆರ್) ಮತ್ತು ಐದು ವಿದೇಶಿ ಪಿಸ್ತೂಲ್‌ಗಳು ಮತ್ತು ಒಂದು ದೇಶ ನಿರ್ಮಿತ ಪಿಸ್ತೂಲ್ ಸೇರಿದಂತೆ ಆರು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ.

ಪೊಲೀಸರ ಪ್ರಕಾರ, ಕಳ್ಳಸಾಗಾಣಿಕೆದಾರರು ಪಾಕಿಸ್ತಾನದಿಂದ ಡ್ರಗ್ಸ್ ಅನ್ನು ದೊಡ್ಡ ರಬ್ಬರ್ ಟ್ಯೂಬ್‌ಗಳಲ್ಲಿ ನೀರಿನ ಮಾರ್ಗದ ಮೂಲಕ ತರುತ್ತಿದ್ದರು. ಬಂಧಿತರನ್ನು ಅಮೃತಸರದ ಬಾಬಾ ಬಕಲದಲ್ಲಿರುವ ಗುರು ತೇಗ್ ಬಹದ್ದೂರ್ ಕಾಲೋನಿಯ ನಿವಾಸಿ ನವಜೋತ್ ಸಿಂಗ್ ಮತ್ತು ಕಪುರ್ಥಾಲಾದ ಕಲಾ ಸಂಘಿ–ಯಾನ್ ನಿವಾಸಿ ಲವ್‌ಪ್ರೀತ್ ಕುಮಾರ್ ಎಂದು ಗುರುತಿಸಲಾಗಿದೆ ಎಂದು ಪಂಜಾಬ್ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಗೌರವ್ ಯಾದವ್ ತಿಳಿಸಿದ್ದಾರೆ. ಭಾರೀ ಪ್ರಮಾಣದ ಹೆರಾಯಿನ್ ಜೊತೆಗೆ, ಕೆಫೀನ್ ಅನ್‌ಹೈಡ್ರಸ್ ಮತ್ತು ಡೆಕ್ಸ್ಟ್ರೋಮೆಥಾರ್ಫಾನ್ ಸೇರಿದಂತೆ ಹೆಚ್ಚಿನ ಪ್ರಮಾಣದ ನಿಷೇಧಿತ ಮಾದಕವಸ್ತುಗಳನ್ನು ಸಹ ಪೊಲೀಸ್ ತಂಡಗಳು ವಶಪಡಿಸಿಕೊಂಡಿವೆ ಎಂದು ಅವರು ಹೇಳಿದರು. ಅಮೃತಸರದ ಕೌಂಟರ್ ಇಂಟೆಲಿಜೆನ್ಸ್ (ಅಖ) ಘಟಕವು ನವ್ ಭುಲ್ಲರ್ ಬಾಬಾ ಬಕಲ ಈಸ್‌ನ ಕಾಲೋನಿ ಲೇಡಿ ರೋಡ್‌ನಲ್ಲಿ ವಾಸಿಸುವ ಸಹಚರರ ಮೂಲಕ ಪಾಕಿಸ್ತಾನದೊಂದಿಗೆ ಸಂಪರ್ಕ ಹೊಂದಿರುವ ವಿದೇಶಿ ಕಳ್ಳಸಾಗಣೆದಾರರು ಕಳ್ಳಸಾಗಣೆ ಜಾಲವನ್ನು ನಡೆಸುತ್ತಿದ್ದಾರೆ ಎಂಬ ಗುಪ್ತಚರ ಮಾಹಿತಿಯ ನಂತರ ಈ ಕ್ರಮವನ್ನು ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು.




**ಡ್ರಗ್ಸ್ ವಶ ಗುಜರಾತ್‌ನಲ್ಲಿ 5000 ಕೋಟಿ ರೂ ಮೌಲ್ಯದ ಡ್ರಗ್ಸ್ ವಶ: ಮೂವರು ಫಾರ್ಮಾ ಕಂಪನಿಗಳ ನಿರ್ದೇಶಕರು ಸೇರಿ ಐವರ ಬಂಧನ!**

ಗುಪ್ತಚರ ಮಾಹಿತಿಯ ನಂತರ, ವಿಶೇಷ ಗುಪ್ತಚರ ನೇತೃತ್ವದ ಕ್ರಮವನ್ನು ಪ್ರಾರಂಭಿಸಲಾಯಿತು ಮತ್ತು ಡಿಎಸ್ಪಿ ಸಿಐ ಅಮೃತಸರ ಬಲ್ಬೀರ್ ಸಿಂಗ್ ಅವರ ಮೇಲ್ವಿಚಾರಣೆಯಲ್ಲಿ ಬಾಬಾ ಬಕಾಲದಲ್ಲಿ ಚೆಕ್‌ಪೋಸ್ಟ್‌ಅನ್ನು ಸ್ಥಾಪಿಸಲಾಯಿತು ಎಂದು ಅವರು ಹೇಳಿದರು. ಈ ಚೆಕ್‌ಪಾಯಿಂಟ್‌ನಲ್ಲಿ ನವಜೋತ್ ಸಿಂಗ್ ಮತ್ತು ಲವ್‌ಪ್ರೀತ್ ಕುಮಾರ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಅವರ ಕಾರಿನಿಂದ 7 ಕೆಜಿ ಹೆರಾಯಿನ್ ವಶಪಡಿಸಿಕೊಂಡಿದ್ದಾರೆ. ಇದಾದ ಬಳಿಕ ಕಾರನ್ನು ಜಪ್ತಿ ಮಾಡಲಾಗಿದೆ ಎಂದರು. ಗ್ಯಾಂಗ್‌ನ ವ್ಯಾಪಕ ಜಾಲವನ್ನು ಪತ್ತೆಹಚ್ಚಲು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಪೊಲೀಸ್ ತಂಡಗಳು ಇತರ ಆರೋಪಿಗಳಿಗಾಗಿ ಶೋಧ ನಡೆಸುತ್ತಿವೆ. ಅಮೃತಸರದಲ್ಲಿ ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಪಿಕ್ ಸಬ್‌ಸ್ಟಾನ್ಸ್ (ಎನ್‌ಡಿಪಿಎಸ್) ಕಾಯ್ದೆಯ ಸೆಕ್ಷನ್ 21, 25 ಮತ್ತು 29 ಮತ್ತು ಶಸ್ತ್ರಾಸ್ತ್ರ ಕಾಯ್ದೆಯ ಸೆಕ್ಷನ್ 25ರ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ.

# ತಿರುಪತಿ ಇಸ್ಕಾನ್ ದೇಗುಲಕ್ಕೆ ಮತ್ತೆ ಬಾಂಬ್ ಬೆದರಿಕೆ; 3 ದಿನದಲ್ಲಿ, ಪೊಲೀಸರಿಂದ ತೀವ್ರ ತನಿಖೆ!

ಅಮರಾವತಿ: ತಿರುಪತಿ ಇಸ್ಕಾನ್ ದೇಗುಲಕ್ಕೆ ಸೋಮವಾರ ಮತ್ತೆ ಬಾಂಬ್ ಬೆದರಿಕೆ ಬಂದಿದ್ದು, ಕೇವಲ 3 ದಿನಗಳ ಅಂತರದಲ್ಲಿ 4ನೇ ಬಾರಿಗೆ ಬೆದರಿಕೆ ಇ–ಮೇಲ್ ಬಂದಿದೆ. ಆಂಧ್ರಪ್ರದೇಶದ ತಿರುಪತಿಯಲ್ಲಿರುವ ಇಸ್ಕಾನ್ ದೇವಸ್ಥಾನಕ್ಕೆ ಮತ್ತೊಂದು ಬಾಂಬ್ ಬೆದರಿಕೆಯೊಂದು ಬಂದಿದ್ದು, ಭಾನುವಾರ (ಅ.27) ತಡರಾತ್ರಿ ಬಾಂಬ್ ಬೆದರಿಕೆ ಬಂದಿದ್ದು, ಈ ಹಿನ್ನೆಲೆಯಲ್ಲಿ ದೇವಸ್ಥಾನದ ಭದ್ರತೆಯನ್ನು ಹೆಚ್ಚಿಸಲಾಗಿದೆ. 'ಪಾಕಿಸ್ತಾನದ ಐಎಸ್‌ಐ ಸಂಘಟನೆಯ ಉಗ್ರರು ದೇವಾಲಯವನ್ನು ಸ್ಫೋಟಿಸಲಿದ್ದಾರೆ' ಎಂದು ಹೇಳುವ ಇಮೇಲ್ ಒಂದು ದೇವಸ್ಥಾನದ ಸಿಬ್ಬಂದಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಬೆಂಗಳೂರು–ಅಯೋಧ್ಯೆ ವಿಮಾನಕ್ಕೆ ಬಾಂಬ್ ಬೆದರಿಕೆ: ತುರ್ತು ಭೂಸ್ಪರ್ಶ**

ಬಾಂಬ್ ಬೆದರಿಕೆ ಬಂದಿರುವ ಮಾಹಿತಿ ಸಿಕ್ಕಿದ ಕೂಡಲೇ ಬಾಂಬ್ ನಿಷ್ಕ್ರಿಯ ದಳ (ಬಿಡಿಎಸ್) ಮತ್ತು ಶ್ವಾನ ದಳದ ತಂಡಗಳು ದೇವಸ್ಥಾನಕ್ಕೆ ಆಗಮಿಸಿ ದೇವಾಲಯದಲ್ಲಿ ಶೋಧ ಕಾರ್ಯಾಚರಣೆ ನಡೆಸಿದೆ. ಆದರೆ, ದೇವಸ್ಥಾನದ ಆವರಣದಲ್ಲಿ ಯಾವುದೇ ಸ್ಫೋಟಕ ಸೇ–ರಿದಂತೆ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ ಎಂದು ತಿಳಿದುಬಂದಿದೆ.



ಮಾದಕ ವಸ್ತು ಕಳ್ಳಸಾಗಣೆ ಜಾಲದ ಕಿಂಗ್‌ಪಿನ್ ಜಾಫರ್ ಸಾದಿಕ್ ನನ್ನು ತಮಿಳುನಾಡಿನಲ್ಲಿ ನಾರ್ಕೋಟಿ–ಕ್ಸ್ ಕಂಟ್ರೋಲ್ ಬ್ಯೂರೋ ಮತ್ತು ಜಾರಿ ನಿರ್ದೇಶನಾಲಯದಿಂದ ಬಂಧಿಸಲಾಗಿದೆ ಎಂದು ಬೆದರಿಕೆಯಲ್ಲಿ ಉಲ್ಲೇಖಿಸಲಾಗಿದೆ.

3 ದಿನದಲ್ಲಿ 4ನೇ ಇ–ಮೇಲ್‌ನ್ನು ಇಸ್ಕಾನ್ ದೇಗುಲಕ್ಕೆ ಬೆದರಿಕೆ ಇ–ಮೇಲ್ ಇದೇ ಮೊದಲೇನಲ್ಲ. ಈ ಹಿಂದೆ 3 ಬಾರಿ ಇಂತಹ ಬೆದರಿಕೆ ಇ–ಮೇಲ್ ಗಳು ಬಂದಿದ್ದು, ಇದು ನಾಲ್ಕನೇ ಬಾರಿ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಕ್ಟೋಬರ್ 26 ರಂದು, ತಿರುಪತಿಯ ಎರಡು ಪ್ರಮುಖ ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆಗಳು ಬಂದಿದ್ದವು, ತಪಾಸಣೆ ನಡೆಸಿದ ಬಳಿಕ ಇದೊಂದು ಹುಸಿ ಬಾಂಬ್ ಕರೆ ಎಂದು ಪೊಲೀಸರು ತಿಳಿಸಿದ್ದಾರೆ. ತಿರುಪತಿ ಸರ್ಕಲ್ ಇನ್ಸ್‌ಪೆಕ್ಟರ್ ಶ್ರೀನಿವಾಸುಲು ಬೆದರಿಕೆ ಇಮೇಲ್ ಸುದ್ದಿಯನ್ನು ಖಚಿತಪಡಿಸಿದ್ದು, ಕಾರಣರಾದವರನ್ನು ಗುರುತಿಸಲು ಸೂಕ್ತ ಮತ್ತು ಅಗತ್ಯ ಪ್ರಯತ್ನಗಳು ನಡೆಯುತ್ತಿವೆ ಎಂದು ಭರವಸೆ ನೀಡಿದರು. ಇದು ಮತ್ತೊಂದು ಸುಳ್ಳು ಸಂದೇಶ ಎಂದು ಪೊಲೀಸರು ಶಂಕಿಸಿದ್ದಾರೆ.

# ಲಖನೌ, ತಿರುಪತಿಯ ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆ, ಪೊಲೀಸರಿಂದ ಶೋಧ

ತಿರುಪತಿ: ನಿತ್ಯ ನೂರಾರು ವಿಮಾನಗಳಿಗೆ ಬಾಂಬ್ ಬೆದರಿಕೆ ಬೆನ್ನಲ್ಲೇ ತಿರುಪತಿ ಪಟ್ಟಣದ ಸುಮಾರು ಅರ್ಧ ಡಜನ್ ಹೋಟೆಲ್‌ಗಳಿಗೆ ಕಳೆದ ಮೂರು ದಿನಗಳಿಂದ ಬಾಂಬ್ ಬೆದರಿಕೆ ಇಮೇಲ್ ಗಳು ಬಂದಿವೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ.ಪೊಲೀಸರು ಬಾಂಬ್ ಬೆದರಿಕೆ ದೂರುಗಳನ್ನು ಸ್ವೀಕ–ರಿಸಿದ ತಕ್ಷಣ, ನಿರ್ದಿಷ್ಟ ಹೋಟೆಲ್ ನಲ್ಲಿದ್ದ ಜನರನ್ನು ಸ್ಥಳಾಂತರಿಸಿ, ಬಾಂಬ್ ನಿಷ್ಕ್ರಿಯ ದಳದಿಂದ ತೀವ್ರ ಶೋಧ ನಡೆಸಿದ್ದಾರೆ. "ನಾವು ದೂರುಗಳನ್ನು ಸ್ವೀಕರಿಸಿದ ತಕ್ಷಣ ನಮ್ಮ ತಂಡಗಳು ಸಂಪೂರ್ಣ ತಪಾಸಣೆ ನಡೆಸಿವೆ. ನಾವು ತ್ವರಿತವಾಗಿ ಪ್ರತಿಕ್ರಿಯಿಸಿದ್ದೇವೆ. ಆದರೆ ಅವು (ನಕಲಿ ಇಮೇಲ್ ಬೆದರಿಕೆಗಳು) ಹುಸಿ ಬಾಂಬ್ ಬೆದರಿಕೆ ಎಂದು ತಿಳಿದುಬಂದಿದೆ. ನಾವು ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ನಡೆಸುತ್ತಿದ್ದೇವೆ" ಎಂದು ತಿರುಪತಿ ಪೊಲೀಸ್ ವರಿಷ್ಠಾಧಿಕಾರಿ ಎಲ್ ಸುಬ್ಬರಾಯುಡು ತಿಳಿಸಿದ್ದಾರೆ. ಭಾನುವಾರವೂ 50 ವಿಮಾನಗಳಿಗೆ ಬಾಂಬ್ ಬೆದರಿಕೆ ಲಖನೌನ 10 ಪ್ರತಿಷ್ಠಿತ ಹೋಟೆಲ್ ಗಳಿಗೂ ಬಾಂಬ್ ಬೆದರಿಕೆ



ಉತ್ತರ ಪ್ರದೇಶ ರಾಜಧಾನಿ ಲಖನೌನ ಕನಿಷ್ಠ 10 ಪ್ರತಿಷ್ಠಿತ ಹೋಟೆಲ್‌ಗಳಿಗೆ ಭಾನುವಾರ ಇಮೇಲ್ ಮೂಲಕ ಬಾಂಬ್ ಬೆದರಿಕೆಗಳು ಬಂದಿವೆ. 55 ಸಾವಿರ ಡಾಲರ್ ನೀಡದಿದ್ದರೆ ಸ್ಫೋಟ ಸಂಭವಿಸುತ್ತದೆ ಎಂದು ಇಮೇಲ್ ಮೂಲಕ ಬೆದರಿಕೆ ಹಾಕಲಾಗಿದೆ.

"ನಿಮ್ಮ ಹೋಟೆಲ್‌ನ ಆವರಣದಲ್ಲಿ ಬಾಂಬ್‌ಗಳನ್ನು ಕಪ್ಪು ಚೀಲಗಳಲ್ಲಿ ಮರೆಮಾಡಲಾಗಿದೆ. ನನಗೆ 55,000 ಅಮೆರಿಕನ್ ಡಾಲರ್ ಬೇಕು. ಕೊಡದಿದ್ದರೆ ಬಾಂಬ್ ಸ್ಫೋಟಿಸುತ್ತೇನೆ ಮತ್ತು ಎಲ್ಲೆಡೆ ರಕ್ತ ಚೆಲ್ಲುತ್ತದೆ. ಬಾಂಬ್‌ಗಳನ್ನು ನಿಷ್ಕ್ರಿಯಗೊಳಿಸಲು ಯತ್ನಿಸಿದರೂ ಸ್ಫೋಟಿಸುತ್ತೇನೆ" ಎಂದು ಇಮೇಲ್ ನಲ್ಲಿ ಬರೆಯಲಾಗಿದೆ. "ಬೆಳಗ್ಗೆ ನಮಗೆ ಬೆದರಿಕೆ ಮೇಲ್ ಬಂದಿತು. ಮುನ್ನೆಚ್ಚರಿಕೆಯಾಗಿ ನಾವು ಸ್ಥಳೀಯ ಪೊಲೀಸ್ ಠಾಣೆಗೆ ವಿಷಯ ತಿಳಿಸಿದ್ದೇವೆ ಮತ್ತು ತಂಡವು ಈ ವಿಷಯವನ್ನು ಪರಿಶೀಲಿಸುತ್ತಿದೆ" ಎಂದು ಹೋಟೆಲ್ ಒಂದರ ಮ್ಯಾನೇಜರ್ ಬ್ರಜೇಶ್ ಕುಮಾರ್ ಅವರು ಪಿಟಿಐಗೆ ತಿಳಿಸಿದ್ದಾರೆ. ಪೊಲೀಸರು ತಕ್ಷಣ ಬಾಂಬ್ ಬೆದರಿಕೆ ಸ್ವೀಕರಿಸಿದ ಎಲ್ಲಾ ಹೋಟೆಲ್ ಗಳಲ್ಲೂ ಶೋಧ ನಡೆಸಿದ್ದು, ತನಿಖೆ ನಡೆಸುತ್ತಿದ್ದಾರೆ.

# ದೆಹಲಿ ಮಾರುಕಟ್ಟೆಯಲ್ಲಿ ಚೈನೀಸ್ ಮೊಬೈಲ್ ಜಾಮರ್ ಮಾರಾಟ; ಅಂಗಡಿ ಮಾಲೀಕನ ಬಂಧನ

ನವದೆಹಲಿ: ಅಕ್ರಮ ಚೈನೀಸ್ ಮೊಬೈಲ್ ಜಾಮರ್ ಮಾರಾಟ ಮಾಡುತ್ತಿದ್ದ ಆರೋಪದ ಮೇರೆಗೆ ದೆಹಲಿ ಪೊಲೀಸರು ಅಂಗಡಿ ಮಾಲೀಕನನ್ನು ಬಂಧಿಸಿದ್ದಾರೆ. ದೆಹಲಿಯ ಪಾಲಿಕಾ ಬಜಾರ್‌ನ ಅಂಗಡಿಯೊಂದರಲ್ಲಿ ಎರಡು ಅಕ್ರಮ ಚೈನೀಸ್ ಜಾಮರ್‌ಗಳು ಪತ್ತೆಯಾಗಿದ್ದು, ಭದ್ರತೆಗೆ ಅಪಾಯವನ್ನುಂಟುಮಾಡುತ್ತವೆ ಮತ್ತು ಅನಧಿಕೃತ ಜನರಿಂದ ಅದರ ದುರ್ಬಳಕೆ ಅಥವಾ ಮಾರಾಟವನ್ನು ನಿಷೇಧಿಸುವ ಸಾಧ್ಯತೆ ಇದೆ. ಇದು ಕೇಂದ್ರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಅಂಗಡಿ ಮಾಲೀಕ ರವಿ ಮಾಥುರ್ ಎಂಬಾತನ ಬಳಿ ಈ ಸಾಧನಗಳನ್ನು ಮಾರಾಟ ಮಾಡಲು ಪರವಾನಗಿ ಮತ್ತು ದಾಖಲೆಗಳಿಲ್ಲದ ಕಾರಣ ಪೊಲೀಸರು ಆತನನ್ನು ಬಂಧಿಸಿದ್ದಾರೆ. ಕೇಂದ್ರದ ನಿಯಮಗಳ ಪ್ರಕಾರ, ಚೀನಾದ ಜಾಮರ್‌ಗಳನ್ನು ಅಧಿಕೃತ ಸರ್ಕಾರ ಮತ್ತು ರಕ್ಷಣಾ ಅಧಿಕಾರಿಗಳು ನಿರ್ದಿಷ್ಟ ಪರವಾನಗಿ ಮತ್ತು ದಾಖಲಾತಿಗಳೊಂದಿಗೆ ಮಾತ್ರ ಬಳಸಬಹುದಾಗಿದೆ. ಊಹೆಗೂ ನಿಲುಕದ ಪರಿಸ್ಥಿತಿಯಲ್ಲಿ ಸೇನೆ ಕೆಲಸ: ಭಾರತ–ಚೀನಾ ಗಸ್ತು ಒಪ್ಪಂದ ಕುರಿತು ಜೈಶಂಕರ್

ಮಾಥುರ್ ಅವರು ಹೇಳುವಂತೆ, 'ಅವರು ದೆಹಲಿಯ ಲಜಪತ್ ರಾಯ್ ಮಾರುಕಟ್ಟೆಯಿಂದ 25,000 ರೂಗೆ ಜಾಮರ್‌ಗಳನ್ನು ಖರೀದಿಸಿದ್ದು, ಅದನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಗುರಿ ಹೊಂದಿದ್ದರು ಎನ್ನಲಾಗಿದೆ. ಈ ಸಾಧನಗಳು 50 ಮೀಟರ್‌ಗಳವರೆಗೆ ಮೊಬೈಲ್ ಸಿಗ್ನಲ್‌ಗಳನ್ನು ಅಡ್ಡಿಪಡಿಸಬಹುದು. ತಿಳಿಸಿದ್ದಾರೆ.

# ಒಳನುಸುಳುವಿಕೆ ತಡೆಯಿಂದ ಮಾತ್ರ ಪಶ್ಚಿಮ ಬಂಗಾಳದಲ್ಲಿ ಶಾಂತಿ ನೆಲಸಲು ಸಾಧ್ಯ: ಅಮಿತ್ ಶಾ

ಕೋಲ್ಕತಾ: ಒಳನುಸುಳುವಿಕೆ ತಡೆಯಿಂದ ಮಾತ್ರ ಪಶ್ಚಿಮ ಬಂಗಾಳದಲ್ಲಿ ಶಾಂತಿ ನೆಲಸುವಂತೆ ಮಾಡಲು ಸಾಧ್ಯ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಪಶ್ಚಿಮ ಬಂಗಾಳದ ಗಡಿಯಲ್ಲಿ ನಿರ್ಮಿಸಿರುವ ಪ್ರಯಾಣಿಕರ ನೂತನ ಟರ್ಮಿನಲ್ ಅನ್ನು ಉದ್ಘಾಟಿಸಿ ಮಾತನಾಡಿದ ಅಮಿತ್ ಶಾ, 'ಪಶ್ಚಿಮ ಬಂಗಾಳದಲ್ಲಿ ಶಾಂತಿ ನೆಲಸಲು ಗಡಿಗಳಲ್ಲಿ ನುಸುಳುವಿಕೆ ಮೇಲೆ ನಿಯಂತ್ರಣ ಸಾಧಿಸುವುದು ಅತ್ಯಗತ್ಯವಾಗಿದೆ. 2026ರಲ್ಲಿ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಅಕ್ರಮ ವಲಸೆಯನ್ನು ತಡೆಯಲಾಗುವುದು ಎಂದು ತಿಳಿಸಿದರು. ಅಕ್ಟೋಬರ್ 23ಕ್ಕೆ ಒಡಿಶಾ–ಪಶ್ಚಿಮ ಬಂಗಾಳ ತೀರ ಅಪ್ಪಳಿಸಲಿರುವ ಚಂಡಮಾರುತ: ಒಆ



ಎಚ್ಚರಿಕೆ ಇದೇ ವೇಳೆ ಸಿಎಂ ಮಮತಾ ಬ್ಯಾನರ್ಜಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅಮಿತ್ ಶಾ, 'ರಾಜ್ಯದಲ್ಲಿ ಭ್ರಷ್ಟಾಚಾರ ಮಿತಿಮೀರಿದೆ. ದೇಶದಲ್ಲಿ ಶಾಂತಿ ನೆಲೆಸಲು ಭೂಬಂದರುಗಳು ಪ್ರಮುಖ ಪಾತ್ರವಹಿಸುತ್ತದೆ. ಬಾಂಗ್ಲಾದೇಶ ಮತ್ತು ಭಾರತದ ಸಂಬಂಧ ಉತ್ತಮವಾಗಿರಲು ಗಡಿಗಳಲ್ಲಿ ನುಸುಳುವಿಕೆಯ ವಿರುದ್ಧ ಕಠಿಣ ಕ್ರಮಕೈಗೊಳ್ಳಬೇಕು.ಉಭಯ ರಾಷ್ಟ್ರಗಳ ವ್ಯಾಪಾರ ಸಂಬಂಧಗಳನ್ನು ಹೆಚ್ಚಿಸುವ ಹಾಗೂ ಬಲಪಡಿಸುವಲ್ಲಿ ಭೂಬಂದರುಗಳು ಪ್ರಮುಖ ಪಾತ್ರವಹಿಸುತ್ತದೆ. ಪೆಟ್ರಾಪೋಲ್ ದಕ್ಷಿಣ ಏಷ್ಯಾದ ಅತಿ ದೊಡ್ಡ ಭೂ ಬಂದರು ಆಗಿದೆ. ಭಾರತ ಹಾಗೂ ಬಾಂಗ್ಲಾದೇಶ ನಡುವಿನ ವಾಣಿಜ್ಯ ಹಾಗೂ ವಹಿವಾಟಿನ ಪ್ರಮುಖ ಭೂಮಾರ್ಗವಾಗಿದೆ.

# ವಡೋದರಾ: ಟಾಟಾ ವಿಮಾನ ತಯಾರಿಕಾ ಸಂಕೀರ್ಣಕ್ಕೆ ಪ್ರಧಾನಿ ಮೋದಿ, ಸ್ಪೇನ್ ಪ್ರಧಾನಿ ಪೆಡ್ರೊ ಸ್ಯಾಂಚೆಜ್ ಚಾಲನೆ!



ವಡೋದರಾ: ಪ್ರಧಾನಿ ನರೇಂದ್ರ ಮೋದಿ ಮತ್ತು ಸ್ಪೇನ್ ಪ್ರಧಾನಿ ಪೆಡ್ರೊ ಸ್ಯಾಂಚೆಜ್ ಇಂದು ಬೆಳಗ್ಗೆ ಗುಜರಾತ್‌ನ ವಡೋದರಾ ನಗರದಲ್ಲಿ ಟಾಟಾ ಏರ್ ಬಸ್ ತಯಾರಿಕಾ ಘಟಕವನ್ನು ಉದ್ಘಾಟಿಸಿದರು. ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ ಕ್ಯಾಂಪಸ್ ನಲ್ಲಿ ಸಿ–295 ವಿಮಾನ ತಯಾರಿಕಾ ಸಂಕೀರ್ಣವನ್ನು ಸ್ಥಾಪಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ, ಅ–295 ಸೌಲಭ್ಯ ನವ ಭಾರತದ ಕೆಲಸದ ಸಂಸ್ಕೃತಿಯನ್ನು ಪ್ರತಿನಿಧಿಸುತ್ತದೆ. ನಾನು ಗುಜರಾತ್ ಸಿಎಂ ಆಗಿದ್ದಾಗ ವಡೋದರಾದಲ್ಲಿ ರೈಲು ಬೋಗಿಗಳ ತಯಾರಿಕೆ ಕಾರ್ಖಾನೆ ಸ್ಥಾಪಿಸಲು ನಿರ್ಧರಿಸಲಾಗಿ–ತ್ತು. ಇಂದು ನಾವು ಆ ಕಾರ್ಖಾನೆಯಲ್ಲಿ ತಯಾ–ರಿಸಿದ ಮೆಟ್ರೋ ಕೋಚ್‌ಗಳನ್ನು ಬೇರೆ ದೇಶಗಳಿಗೆ ರಫ್ತು ಮಾಡುತ್ತಿದ್ದೇವೆ.ಭವಿಷ್ಯದಲ್ಲಿ ಇಲ್ಲಿನ ಕಾರ್ಖಾನೆಯಲ್ಲಿ ತಯಾರಾದ ವಿಮಾನಗಳನ್ನು ಇತರ ದೇಶಗಳಿಗೂ ರಫ್ತು ಮಾಡುವ ಭರವಸೆಯಿದೆ ಎಂದರು.

ಸ್ಪೇನ್ ಪ್ರಧಾನಿ ಸ್ಯಾಂಚೆಜ್ ಮಾತನಾಡಿ, ಹೊಸ ಕೈಗಾರಿಕಾ ತಾಣದ ಪ್ರಾಮುಖ್ಯತೆಯನ್ನು ಒತ್ತಿಹೇಳಿದರು. ಟಾಟಾ ಸಮೂಹವನ್ನು "ದೈತ್ಯರಲ್ಲಿ ದೈತ್ಯ" ಎಂದು ಗುಣಗಾನ ಮಾಡಿದರು. ಇಂದು ನಾವು ಅತ್ಯಾಧುನಿಕ ಕೈಗಾರಿಕಾ ಸೌಕರ್ಯವನ್ನು ಮಾತ್ರ ಅಧಿಕೃತವಾಗಿ ಉದ್ಘಾಟಿಸುತ್ತಿಲ್ಲ. ಏರ್‌ಬಸ್ ಮತ್ತು ಟಾಟಾ ನಡುವಿನ ಈ ಪಾಲುದಾ–ರಿಕೆಯು ಭಾರತೀಯ ಏರೋಸ್ಪೇಸ್ ಉದ್ಯಮದ ಪ್ರಗತಿಗೆ ಕೊಡುಗೆ ನೀಡುತ್ತದೆ. ಅಲ್ಲದೇ ಇತರ ಯುರೋಪಿಯನ್ ಕಂಪನಿಗಳ ಆಗಮನಕ್ಕೆ ಹೊಸ ಬಾಗಿಲು ತೆರೆಯುತ್ತದೆ ಎಂದರು.

ಟಾಟಾ ಬಹುಶಃ ಭಾರತೀಯ ಕೈಗಾರಿಕಾ ಕ್ಷೇತ್ರದ ಬಲವಾಗಿದೆ. ಇದರ ಉತ್ಪನ್ನಗಳು ಮತ್ತು ಸೇವೆಗಳು ಗ್ರಹದ ಮೇಲಿನ ಪ್ರತಿಯೊಂದು ದೇಶದಲ್ಲಿಯೂ ಇವೆ. ಸ್ಪೇನ್‌ಗಾಗಿ, ಏರ್‌ಬಸ್ ಒಕ್ಕೂಟದ ಅವಿಭಾಜ್ಯ ಅಂಗವಾಗಿರುವುದರಿಂದ, ಅದು ಪ್ರತಿನಿಧಿಸುವ ಮೌಲ್ಯಗಳನ್ನು ರಕ್ಷಿಸುತ್ತದೆ. ಇದು ಯುರೋಪಿನ ಸಹಕಾರ, ಆಧುನಿಕತೆ ಹಾಗೂ ಪ್ರಗತಿಯನ್ನು ಕಲ್ಪನೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.

ಇದಕ್ಕೂ ಮುನ್ನಾ ಉಭಯ ದೇಶಗಳ ಪ್ರಧಾನಿ ಭರ್ಜರಿ ರೋಡ್‌ಶೋ ನಡೆಸಿದರು. ವಿಮಾನ ನಿಲ್ದಾಣದಿಂದ ಟಾಟಾ ವಿಮಾನ ತಯಾರಿಕಾ ಸಂಕೀರ್ಣದವರೆಗೂ 2.5 ಕಿ.ಮೀ ದೂರ ತೆರೆದ ಜೀಪ್‌ನಲ್ಲಿ ಪ್ರಯಾಣಿಸಿದ ಉಭಯ ದೇಶಗಳ ನಾಯಕರನ್ನು ಮಾರ್ಗದ ಎರಡೂ ಬದಿಗಳಲ್ಲಿ ನಿಂತಿದ್ದ ಜನರು ಹರ್ಷೋದ್ಗಾರ ಮತ್ತು ಘೋಷಣೆ ಕೂಗುವುದರೊಂದಿಗೆ ಸ್ವಾಗತಿಸಿದರು. ಭಾರತದ ಶ್ರೀಮಂತ ಸಂಸ್ಕೃತಿಯನ್ನು ಪ್ರದರ್ಶಿಸುವ ವಿವಿಧ ಕಲಾವಿದರ ಪ್ರದರ್ಶನ ಆಕರ್ಷಣೀಯವಾಗಿತ್ತು. ವಿಮಾನ ತಯಾರಿಕೆ ಸಂಕೀರ್ಣ ಉದ್ಘಾಟನೆಯ ನಂತರ ಉಭಯ ನಾಯಕರು ದ್ವಿಪಕ್ಷೀಯ ಸಭೆ ನಡೆಸಲು ಐತಿಹಾಸಿಕ ಲಕ್ಷ್ಮಿ ವಿಲಾಸ್ ಅರಮನೆಗೆ ತೆರಳಿದರು.

**2026ಕ್ಕೆ ಟಾಟಾ–ಏರ್ ಬಸ್ ನ ಮೊದಲ ವಿಮಾನ ಪೂರೈಕೆ– ಎನ್. ಚಂದ್ರಶೇಖರನ್**

2021ರ ಸೆಪ್ಟೆಂಬರ್ ನಲ್ಲಿ ಭಾರತ 56 ಸಿ–295 ವಿಮಾನಗಳನ್ನು ಸೇರ್ಪಡೆಗೊಳಿಸಲು ಏರ್ ಬಸ್ ಡಿಫೆನ್ಸ್ ಮತ್ತು ಸ್ಪೇನ್ ಸಂಸ್ಥೆಯೊಂದಿಗೆ ರೂ. 21 ಸಾವಿರ ಕೋಟಿ ಒಪ್ಪಂದಕ್ಕೆ ಸಹಿ ಹಾಕಿತ್ತು. ಈ ಒಪ್ಪಂದದ ಪ್ರಕಾರ ಸ್ಪೇನ್ ಮುಂದಿನ ನಾಲ್ಕು ವರ್ಷಗಳಲ್ಲಿ 16 ಯುದ್ಧ ವಿಮಾನಗಳನ್ನು ರವಾನಿಸಲಾಗಿದೆ. ಉಳಿದ 40 ವಿಮಾನಗಳನ್ನು ಎರಡು ಕಂಪನಿಗಳ ನಡುವಿನ ಒಪ್ಪಂದದ ಭಾಗವಾಗಿ ಈಗ ಉದ್ಘಾಟಿಸಲಾದ ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ ನಲ್ಲಿ ತಯಾರಿಸಲಾಗುತ್ತದೆ.

# ಇತಿಹಾಸದಲ್ಲೇ ಮೊದಲು: ಸಂಪ್ರದಾಯ ಮುರಿದು ದಿವಂಗತ ಮಾಜಿ ಸಿಎಂ ಕರುಣಾನಿಧಿಯಿಂದ

ಚೆನ್ನೈ: ತಮಿಳುನಾಡು ಉಪ ಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ 'ದೀಪಾವಳಿ ಹಬ್ಬದ ಶುಭಾಶಯ' ಕೋರುವ ಮೂಲಕ ಮತ್ತೆ ಸುದ್ದಿಗೆ ಗ್ರಾಸವಾಗಿದ್ದಾರೆ. ಹೌದು.. ತಮಿಳುನಾಡಿನ ಆಡಳಿತರಾಢ ಆಏಪ ಪಕ್ಷದ ಇತಿಹಾಸದಲ್ಲೇ ಮೊದಲು ಎಂಬಂತೆ ಪಕ್ಷದ ಮುಖಂಡ ಹಾಗೂ ಉಪ ಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ 'ದೀಪಾವಳಿ ಹಬ್ಬದ ಶುಭಾಶಯ' ಕೋರಿದ್ದಾರೆ. ಹಬ್ಬಕ್ಕೆ ಶುಭ ಕೋರುವುದು ಎಲ್ಲ ರಾಜಕೀಯ ನಾಯಕರ ಸಾಮಾನ್ಯ ನಡೆಯೇ ಆದರೂ, ಇದು ಡಿಎಂಕೆ ಪಕ್ಷದಲ್ಲಿ ಅತಿ ಅಪರೂಪದ ನಡೆಯಾಗಿದೆ.

ಕಾರಣ ದಿವಂಗತ ಮಾಜಿ ಮುಖ್ಯಮಂತ್ರಿ ಎಂ ಕರುಣಾನಿಧಿಯಿಂದ ಈಗಿನ ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ವರೆಗೂ ಯಾವುದೇ ಡಿಎಂಕೆ ನಾಯಕ ಕೂಡ ಹಬ್ಬಕ್ಕೆ ಶುಭ ಕೋರಿರಲಿಲ್ಲ. ಡಿಎಂಕೆಯ ದಿವಂಗತ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಎಂ ಕರುಣಾನಿಧಿ ಸೇರಿದಂತೆ ಡಿಎಂಕೆ ನಾಯಕರು ತಮ್ಮ ವೈಚಾರಿಕ ನಂಬಿಕೆಗಳಿಗೆ ಅನುಗುಣವಾಗಿ ಈವರೆಗೂ ದೀಪಾವಳಿಯಂದು ಜನರಿಗೆ ಶುಭಾಶಯ ಕೋರಿರಲಿಲ್ಲ. ಡಿಎಂಕೆ ನಾಯಕರು ಕರುಣಾನಿಧಿ ಅವರು ಆರಂಭಿಸಿದ್ದ ಈ ನಿಯಮವನ್ನು ತಪ್ಪದೇ ಪಾಲಿಸಿಕೊಂಡು ಬಂದಿದ್ದರು. ಇದೀಗ ಈ ಸಂಪ್ರದಾಯವನ್ನು ಉದಯನಿಧಿ ಸ್ಟಾಲಿನ್ ಮುರಿದಿದ್ದಾರೆ. ಶನಿವಾರದಂದು ಚೆನ್ನೈನಲ್ಲಿ ನಡೆದ ಪಕ್ಷದ ಕಾರ್ಯಕ್ರಮವೊಂದರಲ್ಲಿ, ಪಕ್ಷದ ಪ್ಲಾಟಿನಂ ಜುಬಿಲಿ ಆಚ–'ರಣೆ ಸಂದರ್ಭದಲ್ಲಿ ಬೆಂಬಲಿಗರಿಗೆ ತಮ್ಮ ಶುಭಾಶಯಗಳನ್ನು ತಿಳಿಸುವ ಸಂದರ್ಭದಲ್ಲಿ, ಉದಯನಿಧಿ ಅವರು "ದೀಪ ಒಲಿ ತಿರುನಾಳ್" ಗಾಗಿ ಜನರಿಗೆ ಶುಭಾಶಯ ಕೋರಿದ್ದು, "ನಮ್ಮ (ಡಿಎಂಕೆ)



ಪ್ಲಾಟಿನಂ ಜುಬಿಲಿ ಆಚರಣೆಗಳಿಗೆ ನಾನು ನನ್ನ ಶುಭಾಶಯಗಳನ್ನು ಸಲ್ಲಿಸುತ್ತೇನೆ; ಅಂತೆಯೇ ನಂಬುವ ಮತ್ತು ಆಚರಿಸುವವರಿಗೆ ದೀಪ ಒಲಿ ತಿರುನಾಳ್ ಶುಭಾಶಯಗಳು" ಎಂದು ಅವರು ಹೇಳಿದರು.

'ದ್ರಾವಿಡವನ್ನು ಯಾರೂ ಮುಟ್ಟಲು ಸಾಧ್ಯವಿಲ್ಲ. ತಮಿಳುನಾಡು ತಮಿಳುನಾಡು ಆಗಿಯೇ ಉಳಿಯುತ್ತದೆ. ನಮ್ಮ ಕಪ್ಪು ಮತ್ತು ಕೆಂಪು (ಡಿಎಂಕೆ) ಧ್ವಜ ಮತ್ತು ಡಿಎಂಕೆ ಕಾರ್ಯಕರ್ತರು ಇರುವವರೆಗೂ ಯಾರೂ ತಮಿಳುನಾಡು ಮತ್ತು ದ್ರಾವಿಡಂ ಅನ್ನು ಮುಟ್ಟಲೂ ಸಾಧ್ಯವಿಲ್ಲ ಎಂದು ಉದಯನಿಧಿ ಸ್ಟಾಲಿನ್ ಹೇಳಿದರು.'ಸನಾತನ ಧರ್ಮ ನಿರ್ಮೂಲನೆ'ಗೆ ಉದಯನಿಧಿ ಸ್ಟಾಲಿನ್ ಕರೆ: ಸುಪ್ರೀಂ ಕೋರ್ಟ್ ಛೀಮಾರಿ

ಶುಭ ಕೋರುವುದರಲ್ಲೂ ವ್ಯಂಗ್ಯ ಇನ್ನು ಸ್ಟಾಲಿನ್ ದೀಪಾವಳಿ ಹಬ್ಬಕ್ಕೆ ಶುಭಕೋರಿದ್ದಾರೆಯಾದರೂ ಅದರಲ್ಲೂ ವ್ಯಂಗ್ಯ ಮಾಡಿದ್ದಾರೆ. "ನಂಬಿಕೆ ಹೊಂದಿರುವವರಿಗೆ" ದೀಪಾವಳಿ ಶುಭಾಶಯಗಳು ಎಂದು ಹೇಳುವ ಮೂಲಕ ಮತ್ತೆ ಬಿಜೆಪಿಯ ಕಾಲೆಳೆದಿದ್ದಾರೆ. ಇದು ವಿರೋಧ ಪಕ್ಷ ಬಿಜೆಪಿ ಆಕ್ರೋಶಕ್ಕೆ ಕಾರಣವಾಗಿದೆ.ದೀಪಾವಳಿ ಮತ್ತು ವಿನಾಯಕ ಚತುರ್ಥಿ ಸೇರಿದಂತೆ ಹಿಂದೂ ಹಬ್ಬಗಳಂದು ಜನರಿಗೆ ಶುಭ ಹಾರೈಸುತ್ತಿರಲಿಲ್ಲ. ಡಿಎಂಕೆಯನ್ನು ಬಿಜೆಪಿ ಗುರಿಯಾಗಿಸುತ್ತಿದೆ.

**ಬಿಜೆಪಿ ಆಕ್ರೋಶ**

ಇನ್ನು ಉದಯನಿಧಿ ಸ್ಟಾಲಿನ್ ಶುಭ ಕೋರಿರುವ ವಿಚಾರಕ್ಕೆ ತಿರುಗೇಟು ನೀಡಿರುವ ಬಿಜೆಪಿ ನಾಯಕ ನಾರಾಯಣನ್ ತಿರುಪತಿ, 'ನಂಬಿಕೆ ಇಲ್ಲದವರಿಗೆ ನರಕಾಸುರನಂತೆ ಬಾಳಲು ಶುಭಾಶಯಗಳು' ಎಂದು ವ್ಯಂಗ್ಯಾತ್ಮಕ ಟ್ವೀಟ್ ಮಾಡಿದ್ದಾರೆ.

# ಯಾವುದೇ ತನಿಖಾ ಸಂಸ್ಥೆ ಫೋನ್ ವೀಡಿಯೊ ಕರೆ ಮೂಲಕ ಸಂಪರ್ಕಿಸುವುದಿಲ್ಲ: ಮೋದಿ ಎಚ್ಚರಿಕೆ

ನವದೆಹಲಿ: "ಡಿಜಿಟಲ್ ಅರೆಸ್ಟ್" ಎಂಬ ಸೈಬರ್ ಅಪರಾಧದ ಬಗ್ಗೆ ಇಂದು ಭಾನುವಾರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಸೈಬರ್ ಕ್ರೈಂ ಹಗರಣಗಳು ಇಂದು ಎಲ್ಲಾ ವರ್ಗದ ಜನರ ಮೇಲೆ ಪರಿಣಾಮ ಬೀರುತ್ತಿದೆ, ಇಂತಹ ಸಂದರ್ಭಗಳಲ್ಲಿ ಜನರು ಯೋಚಿಸುವುದನ್ನುನಿಲ್ಲಿಸಿಕ್ರಮಕೈಗೊಳ್ಳುವ ಮಂತ್ರವನ್ನು ಅಳವಡಿಸಿಕೊಳ್ಳಬೇಕೆಂದು ಜನರನ್ನು ಒತ್ತಾಯಿಸಿದರು.

ತಮ್ಮ ತಿಂಗಳ ರೇಡಿಯೊ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ಇಂದು ಸೈಬರ್ ಕ್ರೈಂ ವಿಷಯದ ಬಗ್ಗೆ ಮಾತನಾಡಿರುವ ಅವರು, ತನಿಖಾ ಸಂಸ್ಥೆಗಳು ಈ ಸಮಸ್ಯೆಯನ್ನು ಎದುರಿಸಲು ರಾಜ್ಯಗಳೊಂದಿಗೆ ಕೆಲಸ ಮಾಡುತ್ತಿವೆ. ಈ ಅಪರಾಧಗಳಿಂದ ರಕ್ಷಿಸಿಕೊಳ್ಳುವಲ್ಲಿ ಜಾಗೃತಿ ಅಗತ್ಯ ಎಂದು ಹೇಳಿದರು. ಸೈಬರ್ ಕ್ರೈಂಗೆ ತುತ್ತಾದವರ ಬಗ್ಗೆ ವಿವರವಾದ ಮಾಹಿತಿಯನ್ನು ಸಂಗ್ರಹಿಸಿದ ನಂತರ ಜನರ ಭಯವನ್ನು ನಿವಾರಿಸಲು ಅಪರಾಧಿಗಳು ತನಿಖಾ ಸಂಸ್ಥೆ ಅಧಿಕಾರಿಗಳಂತೆ ಹೇಗೆ ಫೋಸ್ ನೀಡುತ್ತಾರೆ ಎಂಬುದನ್ನು ತೋರಿಸಲು ಪ್ರಧಾನಿ ವಿಡಿಯೊವೊಂದನ್ನು ಪ್ರದರ್ಶಿಸಿದರು.



ಡಿಜಿಟಲ್ ಅರೆಸ್ಟ್: "ಡಿಜಿಟಲ್ ವಂಚನೆಗಳ ಬಗ್ಗೆ ಎಚ್ಚರದಿಂದಿರಿ. ಇಂತಹ ತನಿಖೆಗಳಿಗೆ ಯಾವುದೇ ತನಿಖಾ ಸಂಸ್ಥೆಯು ಫೋನ್ ಅಥವಾ ವೀಡಿಯೊ ಕರೆ ಮೂಲಕ ನಿಮ್ಮನ್ನು ಸಂಪರ್ಕಿಸುವುದಿಲ್ಲ ಎಂದರು. ರಾಷ್ಟ್ರೀಯ ಸೈಬರ್ ಸಹಾಯವಾಣಿಯೊಂದಿಗೆ ಸಂಪರ್ಕ ಸಾಧಿಸಲು ಅಥವಾ ಅದರ ಪೋರ್ಟಲ್ ನೊಂದಿಗೆ ಸಂಪರ್ಕ ಸಾಧಿಸಲು 1930 ನಂಬರ್ ಡಯಲ್ ಮಾಡಲು ಮತ್ತು ಅಂತಹ ಅಪರಾಧದ ಬಗ್ಗೆ ಪೊಲೀಸರಿಗೆ ತಿಳಿಸಿ. ಇಂತಹ ಕರೆಗಳು ಬಂದಾಗ ಸಂಭಾಷಣೆಗಳನ್ನು ರೆಕಾರ್ಡ್ ಮಾಡಿ ಸ್ಕ್ರೀನ್‌ಶಾಟ್‌ಗಳನ್ನು ತೆಗೆದು ದೂರು ನೀಡಿ ಎಂದರು. ಪ್ರಧಾನ ಮಂತ್ರಿಗಳು ಎನಿಮೇಷನ್ ಜಗತ್ತಿನಲ್ಲಿ ಭಾರತೀಯ ಪ್ರತಿಭೆಗಳು ಹೆಚ್ಚುತ್ತಿರುವ ಬಗ್ಗೆ ಶ್ಲಾಘಿಸಿದರು. ಸೃಜನಶೀಲ ಶಕ್ತಿಯ ಅಲೆಯು ಭಾರತವನ್ನು ಆವರಿಸುತ್ತಿದೆ. ಅನಿಮೇಷನ್ ಜಗತ್ತಿನಲ್ಲಿ 'ಮೇಡ್ ಇನ್ ಇಂಡಿಯಾ' ಮತ್ತು 'ಮೇಡ್ ಬೈ ಇಂಡಿಂ–ಯಾ' ಪ್ರಕಾಶಮಾನವಾಗಿ ಮಿಂಚುತ್ತಿವೆ ಎಂದರು. ಸೆಮಿಕಂಡಕ್ಟರ್ ಡಿಜಿಟಲ್ ಯುಗದ ಆಧಾರವಾಗಿದೆ: ಪ್ರಧಾನಿ ಮೋದಿ

ಛೋಟಾ ಭೀಮ್, ಕೃಷ್ಣ ಮತ್ತು ಮೋಟು ಪತ್ಲು ಮುಂತಾದ ಭಾರತೀಯ ಅನಿಮೇಷನ್ ಪಾತ್ರಗಳು ವ್ಯಾಪಕವಾಗಿ ಜನಪ್ರಿಯವಾಗಿವೆ. ಭಾರತದ ವಿಷಯ, ಸಂಸ್ಕೃತಿ ಮತ್ತು ಸೃಜನಶೀಲತೆಯನ್ನು ಜಗತ್ತಿನಾದ್ಯಂತ ಇಷ್ಟಪಡಲಾಗುತ್ತಿದೆ ಎಂದು ಅವರು ಹೇಳಿದರು.

ಭಾರತವು ಅನಿಮೇಷನ್‌ನಲ್ಲಿ ಕ್ರಾಂತಿಯನ್ನು ಸೃಷ್ಟಿಸುವ ಹಾದಿಯಲ್ಲಿದೆ. ಭಾರತೀಯ ಆಟಗಳು ಕೂಡ ಜನಪ್ರಿಯವಾಗುತ್ತಿವೆ ಎಂದು ಮೋದಿ ಹೇಳಿದರು. 'ಆತ್ಮನಿರ್ಭರ ಭಾರತ'ದ ಪ್ರಯತ್ನವು ಪ್ರತಿಯೊಂದು ವಲಯದಲ್ಲೂ ದಾಪುಗಾಲು ಹಾಕುತ್ತಿದೆ, ದೇಶವು ತನ್ನ ರಕ್ಷಣಾ ಉತ್ಪನ್ನಗಳನ್ನು ಈಗ 85 ಕ್ಕೂ ಹೆಚ್ಚು ದೇಶಗಳಿಗೆ ರಫ್ತು ಮಾಡುತ್ತಿದೆ ಎಂದರು.

# ಅಮೆರಿಕನ್–ಇಂಡಿಯನ್ ಸ್ಪಿರಿಟ್, ಇದು ವಿಶ್ವದ ಹೊಸ ಶಕ್ತಿ: ನ್ಯೂಯಾರ್ಕ್‌ನಲ್ಲಿ ಪ್ರಧಾನಿ ಮೋದಿ

ನ್ಯೂಯಾರ್ಕ್: ಜಗತ್ತಿಗೆ ೦ಖ ಅಂದ್ರೆ ಕೃತಕ ಬುದ್ಧಿಮತ್ತೆ. ಆದರೆ, ನನಗೆ ೦ಖ ಎಂದರೆ ಅಮೆರಿಕನ್–ಇಂಡಿಯನ್ ಸ್ಪಿರಿಟ್. ಇದು ವಿಶ್ವದ ಹೊಸ '೦ಖ' ಶಕ್ತಿ...." ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ಹೇಳಿದ್ದಾರೆ.

ಇಂದು ನ್ಯೂಯಾರ್ಕ್ ನ ನಸ್ಸೌ ವೆಟರನ್ಸ್ ಮೆಮೋ–ರಿಯಲ್ ಕೊಲಿಜಿಯಂನಲ್ಲಿ ಅನಿವಾಸಿ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತವು ಈಗ ಅವಕಾಶಗಳ ನಾಡಾಗಿದೆ. ಭಾರತ ಇನ್ನು ಮುಂದೆ ಅವಕಾಶಗಳಿಗಾಗಿ ಕಾಯುವುದಿಲ್ಲ. ಅವಕಾಶಗಳನ್ನು ಸೃಷ್ಟಿಸುತ್ತದೆ ಎಂದರು.

"ಇಲ್ಲಿಯೂ ಈಗ ಚುನಾವಣೆ ನಡೆಯುತ್ತಿದೆ. ಭಾರತದಲ್ಲಿ ಇತ್ತೀಚೆಗೆ ನಡೆದ ಚುನಾವಣೆಗಳು ಇತಿಹಾಸದಲ್ಲಿ ಇದುವರೆಗೆ ನಡೆದ ಅತಿದೊಡ್ಡ ಚುನಾವಣೆಗಳಾಗಿವೆ. ಅಮೆರಿಕದ ಒಟ್ಟು ಜನಸಂಖ್ಯೆಗಿಂತ ನಾವು ಸುಮಾರು ಎರಡು ಪಟ್ಟು ಹೆಚ್ಚಿದ್ದೇವೆ. ಈ ಪ್ರಮಾಣದ ಭಾರತೀಯ ಪ್ರಜಾಪ್ರಭುತ್ವವನ್ನು ನೋಡಿದಾಗ ನಾವು ಇನ್ನಷ್ಟು ಹೆಮ್ಮೆಪಡುತ್ತೇವೆ ಎಂದರು.

ಪ್ರಧಾನಿ ಮೋದಿ ನಾವು ಯಾರ ವಿರುದ್ಧವೂ ಅಲ್ಲ– ಪ್ರಧಾನಿ ಮೋದಿ; ಚೀನಾ ನಮ್ಮನ್ನು ಪರೀಕ್ಷಿಸುತ್ತಿದೆ ಎಂದ ಅಮೆರಿಕ ಅಧ್ಯಕ್ಷ ಬೈಡನ್!

ನಿನ್ನೆ, ಅಧ್ಯಕ್ಷ ಬೈಡೆನ್ ಅವರು ನನ್ನನ್ನು ಡೆಲವೇರ್‌ನಲ್ಲಿರುವ ಅವರ ಮನೆಗೆ ಆಹ್ವಾನಿಸಿದ್ದರು. ಅವರ ಪ್ರೀತಿಯ ಆತಿಥ್ಯದಿಂದ ನನ್ನ ಹೃದಯ ತುಂಬಿ ಬಂದಿತು. ಇದು 140 ಕೋಟಿ ಭಾರತೀಯರಿಗೆ ಸಿಕ್ಕ ಗೌರವ, ಈ ಗೌರವವು ನಿಮ್ಮದು ಮತ್ತು ಇಲ್ಲಿ ವಾಸಿಸುವ ಲಕ್ಷಾಂತರ ಭಾರತೀಯರದ್ದು ಎಂದು ಪ್ರಧಾನಿ ಮೋದಿ ಹೇಳಿದರು. ನೀವು ಭಾರತವನ್ನು ಅಮೆರಿಕಕ್ಕೆ ಮತ್ತು ಅಮೆ–ರಿಕವನ್ನು ಭಾರತಕ್ಕೆ ಸಂಪರ್ಕಿಸಿದ್ದೀರಿ. ನಿಮ್ಮ ಕೌಶಲ್ಯ, ಪ್ರತಿಭೆ ಮತ್ತು ಬದ್ಧತೆಗೆ ಯಾವುದೇ ಸ್ಪರ್ಧೆಯಿಲ್ಲ. ನೀವು ಏಳು ಸಮುದ್ರಗಳನ್ನು ದಾಟಿ ಬಂದಿರಬಹುದು. ಆದರೆ ಯಾವುದೇ ಸಮುದ್ರವು ನಿಮ್ಮನ್ನು ಭಾರತದಿಂದ ದೂರವಿ–ರಿಸುವಷ್ಟು ಆಳವಾಗಿಲ್ಲ. ಭಾರತ ನಮಗೆ ಕಲಿಸಿದುದನ್ನು ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದರು.

# ಸಿಕ್ಕ ಹಣ ಮರಳಿಸಿ ಪ್ರಾಮಾಣಿಕತೆ ಮೆರೆದ ಶಾಲಾ ವಿದ್ಯಾರ್ಥಿ



■ ಉದಯರಶ್ಮಿ ದಿನಪತ್ರಿಕೆ

ಬಬಲೇಶ್ವರ: ಶಾಲೆಯಿಂದ ಮರಳಿ ಮನೆಗೆ ಹೋಗುವಾಗ ತನಗೆ ಸಿಕ್ಕ ರೂ. 3100 ರೂಪಾಯಿಗಳನ್ನು ಬಬಲೇಶ್ವರ ತಾಲ್ಲೂಕಿನ ಹೊನಗನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಕೊರಮ್ಮದೇವಿ ತೋಟದ ವಸ್ತಿ ಶಾಲೆಯ ಐದನೇ ತರಗತಿ ವಿದ್ಯಾರ್ಥಿ ಮಲ್ಲಿಕಾರ್ಜುನ್ ಮಾದರ ಶಾಲೆಯ ಮುಖ್ಯ ಗುರುಮಾತೆ ಎಸ್.ಆರ್. ಮೇಡೇಗಾರ್ ಅವರ ಕೈಯಲ್ಲಿ ತಂದುಕೊಟ್ಟು ಪ್ರಾಮಾಣಿಕತೆಯನ್ನು ಮೆರೆದಿದ್ದಾನೆ.

ಹಣ ತಂದು ಕೊಟ್ಟ ನಂತರ ಮುಖ್ಯಗುರುಮಾತೆ ವಿಧ್ಯಾರ್ಥಿಗೆ ಪ್ರೋತ್ಸಾಹಿಸಿ ಹಣ ಕಳೆದುಕೊಂಡ ರಾಜಪ್ಪ ಕವಟಗಿ ಅವರನ್ನು ಶಾಲೆಗೆ ಕರೆಸಿ ಆ ಮಗುವಿನ ಕೈಯಿಂದ ಅವರಿಗೆ ಹಣ ಮರಳಿ ಕೊಡಿಸಿ ಮಗುವಿನ ಪ್ರಾಮಾಣಿಕತೆಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಈ ಪ್ರಾಮಾಣಿಕತೆ ಇತರೆ ಮಕ್ಕಳಿಗೂ ಮಾದರಿಯಾಗಿದೆ.

## ವಿವಿಧ ಗ್ರಾಮ ಪಂಚಾಯತಿಗಳಿಗೆ ಉಪ ಚುನಾವಣೆ ಘೋಷಣೆ

# ಕರಡು ಮತದಾರರ ಪಟ್ಟಿ ಪ್ರಕಟ :ಆಕ್ಷೇಪಣೆಗಳ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯ ಚುನಾವಣಾ ಆಯೋಗ ವಿಜಯಪುರ ಜಿಲ್ಲೆಯ ವಿವಿಧ ಕಾರಣಗಳಿಂದ ಖಾಲಿ-ತೆರವಾಗಿರುವ ಗ್ರಾಮ ಪಂಚಾಯತ್ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆಯನ್ನು ಘೋಷಿಸಿ ಆದೇಶ ಹೊರಡಿಸಿದ್ದು, ಉಪಚುನಾವಣೆಗೆ ಸಂಬಂಧಿಸಿದಂತೆ ಉಪ ಚುನಾವಣೆ ನಡೆಯುವ ವಿವಿಧ ಗ್ರಾಮ ಪಂಚಾಯತಿಯ ಮತದಾರರನ್ನು ಅಳವಡಿಸಿಕೊಂಡು ಕರಡು ಮತದಾರರ ಪಟ್ಟಿಯನ್ನು ಅ.25ರಂದು ನಿಡಗುಂದಿ, ಇಂಡಿ, ಬಸವನಬಾಗೇವಾಡಿ, ಬಬಲೇಶ್ವರ, ವಿಜಯಪುರ, ಮುದ್ದೇಬಿಹಾಳ, ತಾಳಿಕೋಟೆ ಹಾಗೂ ಚಡಚಣ ತಾಲೂಕಾ ಕಚೇರಿಗಳಲ್ಲಿ ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ದಿನಾಂಕ: 22-01-2024ರಂದು ಪ್ರಕಟವಾಗಿರುವ ವಿಧಾನಸಭಾ ಅಂತಿಮ ಮತದಾರರ ಪಟ್ಟಿ ಹಾಗೂ ಅರ್ಹತಾ ದಿನಾಂಕ : 01-04-2024ರಂತೆ ದಿನಾಂಕ : 04-04-2024ರಂದು ಪ್ರಕಟಗೊಂಡಿರುವ ಪೂರಕ ಪಟ್ಟಿಯ ಮುದ್ರಿತ ಪ್ರತಿಯನ್ನು ಅಳವಡಿಸಿಕೊಂಡು ಹಾಗೂ ಉಪ ಚುನಾವಣೆ ನಡೆಯುವ ನಿಡಗುಂದಿ ತಾಲೂಕಿನ ಆಲಮಟ್ಟಿ ಹಾಗೂ ಚಿಮ್ಮಲಗಿ, ಇಂಡಿ ತಾಲೂಕಿನ ಸಾಲೋಟಗಿ ಹಾಗೂ ಖೇಡಗಿ, ಬಸವನಬಾಗೇವಾಡಿ ತಾಲೂಕಿನ ವಡವಡಗಿ, ಮತ್ತಗಿ ಹಾಗೂ ಬ್ಯಾಕೋಡ, ಬಬಲೇಶ್ವರ ತಾಲೂಕಿನ ಬೋಳಚಿಕ್ಕಲಕಿ, ವಿಜಯಪುರ ತಾಲೂಕಿನ ಕನ್ನೂರ, ನಾಗಠಾಣ, ಹೊನಗನಹಳ್ಳಿ ಹಾಗೂ ಜುಮನಾಳ, ಮುದ್ದೇಬಿಹಾಳ ತಾಲೂಕಿನ ಕುಂಟೋಜಿ, ತಾಳಿಕೋಟೆ ತಾಲೂಕಿನ ಹಿರೂರ, ಚಡಚಣ ತಾಲೂಕಿನ ಲೋಣಿ ಬಿ.ಕೆ. ಹಾಗೂ ಹತ್ತಳ್ಳಿ ಕ್ಷೇತ್ರಗಳನ್ನು ಒಳಗೊಂಡಿರುವ ಕರಡು ಮತದಾರರ ಪಟ್ಟಿಯನ್ನು ಸಾರ್ವಜನಿಕರು ಹಾಗೂ ಮತದಾರರ ವೀಕ್ಷಣೆಗೆ ಪ್ರಕಟಿಸಲಾಗಿದೆ.

ಪ್ರಕಟಿತ ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ: 29-10-2024ರೊಳಗಾಗಿ ವಾಸವಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಇರದ ಬೇರೆ ಕ್ಷೇತ್ರಗಳ ಮತದಾರರು ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಅಥವಾ ನಗರದ ಪ್ರದೇಶ ಮತದಾರರು ಹೆಸರು ಅಥವಾ ವಿಧಾನಸಭಾ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗದೇ ಇರುವ ಹೆಸರುಗಳನ್ನು ವಿಜಯಪುರ ವಾರ್ಡ ನಂ.29ರಲ್ಲಿ ತಯಾರಿಸಲಾದ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಮಾತ್ರ ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿ ಅಂತಿಮ ಮತದಾರರ ಪಟ್ಟಿಯನ್ನು ದಿನಾಂಕ : 30-10-2024 ರಂದು ಪ್ರಕಟಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವರು ಸರ್ವವ್ಯಾಪಿ: ಕನ್ನೇರಿಯ ಅದೃಶ್ಯ ಕಾಡಸಿದ್ದೇಶ್ವರ ಶ್ರೀ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ಪ್ರಕೃತಿ ನಮ್ಮ ಬದುಕಿಗೆ ಬೇಕಾದ ಎಲ್ಲವನ್ನು ನೀಡಿದೆ. ಅದಕ್ಕಾಗಿಯೇ ನಾವು ದೇವರನ್ನು ವಿವಿಧ ರೂಪದಲ್ಲಿ ಆರಾಧಿಸುತ್ತಿದ್ದೇವೆ. ದೇವರು ಸರ್ವವ್ಯಾಪಿಯಾಗಿದ್ದಾನೆ. ಪ್ರತಿಯೊಬ್ಬರೂ ಏಕಾಗ್ರತೆಯಿಂದ ಧ್ಯಾನದಲ್ಲಿ ತೊಡಗುವ ಮೂಲಕ ಬದುಕಿನಲ್ಲಿ ಸಾಧನೆ ಮಾಡಬೇಕೆಂದು ಕನ್ನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಪಟ್ಟಣದ ಬಸವ ಭವನದಲ್ಲಿ ಮಹಾರಾಜ ಮಠದ ಸಿದ್ದರಾಮೇಶ್ವರ ಮಹಾರಾಜರ ಪುಣ್ಯಸ್ಮರಣೋತ್ಸವದಂಗವಾಗಿ ಸೋಮವಾರ ಹಮ್ಮಿಕೊಂಡಿದ್ದ ಸತ್ಸಂಗ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ನಮ್ಮ ಹಿಂದು ಧರ್ಮದ ಸಂಸ್ಕೃತಿಯ ಜಗತ್ತಿನಲ್ಲಿಯೇ ವೈಶಿಷ್ಟ್ಯಪೂರ್ಣವಾಗಿದೆ. ನಮ್ಮ ಧರ್ಮದಲ್ಲಿ ಅವರ ಭಾವಕ್ಕೆ ತಕ್ಕಂತೆ ದೇವರನ್ನು ಪೂಜಿಸುವ ಸ್ವಾತಂತ್ರ್ಯ ಕೊಟ್ಟಿದೆ. ದೇವರನ್ನು ಮೂರ್ತಿ, ಪ್ರಾಣಿ, ವೃಕ್ಷ,ಜಲ, ಮಣ್ಣು ಸೇರಿದಂತೆ ವಿವಿಧ ರೂಪದಲ್ಲಿ ಪೂಜಿಸಲಾಗುತ್ತಿದೆ ಎಂದರು.

ಸಮಾಜವನ್ನು ಸನ್ಮಾರ್ಗದಲ್ಲಿ ತರುವ ನಿಟ್ಟಿನಲ್ಲಿ ದೇಶದ ಎಲ್ಲ ರಾಜ್ಯಗಳಲ್ಲಿಯೂ ಭಕ್ತಿ ಆಂದೋಲನ ನಡೆದಿವೆ. 12 ನೇ ಶತಮಾನದಲ್ಲಿ ಬಸವೇಶ್ವರರು ಸಮಾನತೆ ಸಂದೇಶ ಸಾರುವ ಮೂಲಕ ಇಷ್ಟಲಿಂಗ ಪೂಜೆ ಮಹತ್ವ ಸಾರುವ ಮೂಲಕ ಭಕ್ತಿ ಆಂದೋಲನ ಮಾಡಿದ್ದಾರೆ. ಏಕನಾಥ ಮಹಾರಾಜರು ಭಕ್ತಿ ಆಂದೋಲನದ ಮೂಲಕ ಜನರನ್ನು ಸನ್ಮಾರ್ಗದತ್ತ ತೆಗೆದುಕೊಂಡು ಹೋದರು. ಸಮಾಜದಲ್ಲಿ ಮೇಲು-ಕೀಳು ಎಂಬ ಬೇಧಭಾವ ಹೋಗಲಾಡಿಸಲು ಮಹಾನ್ ಪುರುಷರು ಶ್ರಮಿಸಿದ್ದಾರೆ. ಇಲ್ಲಿನ ಮಹಾರಾಜ ಮಠದ ಸಿದ್ದರಾಮೇಶ್ವರರು ಭಾವಸಾರ ಮಹಾರಾಜರಿಂದ ದೀಕ್ಷೆ ಪಡೆದರು. ಆಧ್ಯಾತ್ಮದಲ್ಲಿ ಸಾಧನೆ ಮಾಡಿ ಅಪಾರ ಶಿಷ್ಯರಿಗೆ ಬೋಧನೆ ಮಾಡಿದ್ದಾರೆ ಎಂದರು. ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಸಾವಯವ ಕೃಷಿ, ಗೋ ಸಾಕಣೆ ಸೇರಿದಂತೆ ಅನೇಕ ರಂಗಗಳಲ್ಲಿ ಕನ್ನೇರಿ ಪೂಜ್ಯರ ಮಾರ್ಗದರ್ಶನ ತುಂಬಾ ಅಗತ್ಯವಿದೆ. ಇಡೀ ದೇಶ ಇಂತಹ ಪೂಜ್ಯರನ್ನು ಪಡೆದುಕೊಂಡಿರುವುದು ಪುಣ್ಯ.ಮಹಾತ್ಮ ಬಸವೇಶ್ವರರರು ಜಗತ್ತಿಗೆ ಕಾಯಕ ತತ್ವ, ದಾಸೋಹ ತತ್ವ, ಅನುಭಾವ ತತ್ವ ನೀಡಿದರು. ಈ ಪರಂಪರೆಯನ್ನು ವಿಜಯಪುರದ ಸಿದ್ದೇಶ್ವರ ಪೂಜ್ಯರು ನಡೆಸಿಕೊಂಡು ಹೋಗುವ ಮೂಲಕ ಅವರು ಎರಡನೇ ಬಸವೇಶ್ವರರು ಎನಿಸಿಕೊಂಡಿದ್ದರು. ಕನ್ನೇರಿ ಮಠದ ಅದೃಶ್ಯಕಾಡಸಿದ್ದೇಶ್ವರ ಪೂಜ್ಯರು ಜನತೆಗೆ ಅನುಭಾವ ನೀಡುತ್ತಿದ್ದಾರೆ ಎಂದು ಅತಿಶೋಕ್ತಿಯಾಗಲಾರದು ಎಂದರು.

ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ಮಾತನಾಡಿ, ನಾವು ನೆಮ್ಮದಿಯಿಂದ ಹೇಗೆ ಬದುಕು ಬೇಕು ಎಂಬುವದನ್ನು ಅನಾದಿ ಕಾಲದಿಂದಲೂ ನಮ್ಮ ದೇಶದ ಧರ್ಮ ಹೇಳಿದೆ. ಕನ್ನೇರಿ ಮಠದಲ್ಲಿ ಅನೇಕ ಸಂಶೋಧನೆ ಮಾಡುವ ಮೂಲಕ ಇಡೀ ಜಗತ್ತಿಗೆ ಮಾದರಿಯಾಗುವಂತೆ ಮಠವನ್ನು ಅದೃಶ್ಯಕಾಡಸಿದ್ದೇಶ್ವರ ಪೂಜ್ಯರು ಕಟ್ಟುವ ಮೂಲಕ ನಮಗೆ ಉತ್ತಮ ಮಾರ್ಗದರ್ಶನ ನೀಡುತ್ತಿದ್ದಾರೆ ಎಂದರು.

ನಂದಿ ಸಕ್ಕರೆ ಕಾರ್ಖಾನೆಯ ನಿರ್ದೇಶಕ ಸತ್ಯಜೀತ ಪಾಟೀಲ ಮಾತನಾಡಿ, ಬಸವನಬಾಗೇವಾಡಿ ಸುಕ್ಷೇತ್ರದಲ್ಲಿ ಭಾವೈಕ್ಯತೆಯಿಂದ ಮಹಾರಾಜ ಮಠದ ಸಪ್ತಾಹದಲ್ಲಿ ಭಾಗವಹಿಸುವ ಮೂಲಕ ಸತ್ಸಂಗ ಮಾಡುವ ಮೂಲಕ ಈ ಕ್ಷೇತ್ರದ ಶಕ್ತಿಯನ್ನು ಇನ್ನಷ್ಟು ಹೆಚ್ಚಿಸುವಲ್ಲಿ ಪೂರಕವಾಗಿದೆ. ಇಡೀ ಜಗತ್ತಿಗೆ ವಚನ ಸಾಹಿತ್ಯ ಅಮೂಲ್ಯವಾದ ಸಾಹಿತ್ಯವನ್ನು ಬಸವೇಶ್ವರರು ನೀಡಿದ್ದಾರೆ. ನಾವೆಲ್ಲರೂ ವಚನ ಸಾಹಿತ್ಯವನ್ನು ಓದುವ ಮೂಲಕ ಉತ್ತಮ ಜೀವನ ಸಾಗಿಸಬೇಕು. ಇಡೀ ಜಗತ್ತಿನಲ್ಲಿ ಭಾವೈಕ್ಯತೆ ಕಡಿಮೆಯಾಗುತ್ತಿರುವುದು ವಿಷಾದಕರ ಸಂಗತಿ. ಜಗತ್ತಿನಲ್ಲಿ ಜಾತಿ ಆಧಾರದ ಮೇಲೆ ಯುದ್ಧ ನಡೆಯುತ್ತಿವೆ. ಕೆಲವೆಡೆ ಚಿಕ್ಕಮಕ್ಕಳು ತಮ್ಮ ಕೈಯಲ್ಲಿಯೇ ಬಂದೂಕು ಹಿಡಿದು ತಮ್ಮ ತಮ್ಮ ಸಹೋದರರನ್ನು ಕೊಲ್ಲುತ್ತಿರುವುದನ್ನು ನೋಡುತ್ತಿದ್ದೇವೆ. ಭಾರತ ದೇಶ ಇಡೀ ಜಗತ್ತಿಗೆ ಭಾವೈಕ್ಯತೆಯ ಸಂದೇಶ ಸಾರುತ್ತಿದೆ ಎಂದರು.

ಮುಪ್ಪಿನ ಕಾಡಸಿದೇಶ್ವರ ಸ್ವಾಮೀಜಿ, ಶಂಕರನಾಂದ ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ, ಗಿರೀಶಾನಂದ ಸ್ವಾಮೀಜಿ, ಹರ್ಷಾನಂದ ಸ್ವಾಮೀಜಿ, ಅಭಯಾನಂದ ಸ್ವಾಮೀಜಿ ಮಾತನಾಡಿದರು. ಸತ್ಸಂಗ ಕಾರ್ಯಕ್ರಮದಲ್ಲಿ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಸಂಗಯ್ಯ ಕಾಳಹಸ್ತೇಶ್ವಮಠ, ಬಸವರಾಜ ನಾಯ್ಕೋಡಿ, ವಿನುತ ಕಲ್ಲೂರ, ಬಸವರಾಜ ಗಚ್ಚಿನವರ, ಶಿವಾನಂದ ತೋಳನೂರ, ಬಸವರಾಜ ಶೆಂಡೆ, ಬಸವರಾಜ ಚಿಂಚೋಳಿ ಮಹಾರಾಷ್ಟ್ರ ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಅಪಾರ ಜನರು ಸೇರಿದಂತೆ ಇತರರು ಇದ್ದರು.

### ವೈಭವದ ಪಲ್ಲಕ್ಕಿ ಉತ್ಸವ

ಸಪ್ತಾಹದಂಗವಾಗಿ ಬೆಳಗ್ಗೆ ಮಹಾರಾಜರ ಮಠದಲ್ಲಿ ವಿಶೇಷ ಪೂಜೆ, ಕಾಕಡಾರತಿ, ಭಜನೆ ಜರುಗಿತು. ಸಂಜೆ ಸಿದ್ದರಾಮೇಶ್ವರ ಮಹಾರಾಜರ ಪಲ್ಲಕ್ಕಿ ಉತ್ಸವವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಿತು.
ಪಲ್ಲಕ್ಕಿ ಉತ್ಸವದಲ್ಲಿ ಕನ್ನೇರಿ ಗುರುಕುಲ ಮಠದ ವಿವಿಧ ಕಲಾ ತಂಡಗಳು ಗಮನ ಸೆಳೆದವು.

## ವಿಜಯಪುರ ವಾರ್ಡ ನಂ.29ಕ್ಕೆ ಉಪ ಚುನಾವಣೆ ಘೋಷಣೆ

# ಕರಡು ಮತದಾರರ ಪಟ್ಟಿ ಪ್ರಕಟ :ಆಕ್ಷೇಪಣೆಗಳ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯ ಚುನಾವಣಾ ಆಯೋಗ ವಿಜಯಪುರ ಮಹಾನಗರ ಪಾಲಿಕೆಯ ವಾರ್ಡ-29ಕ್ಕೆ ಉಪ ಚುನಾವಣೆಯನ್ನು ಘೋಷಿಸಿ ಆದೇಶ ಹೊರಡಿಸಿದ್ದು, ಉಪಚುನಾವಣೆಗೆ ಸಂಬಂಧಿಸಿದಂತೆ ಮಹಾನಗರ ಪಾಲಿಕೆಯ ವಾರ್ಡ ನಂ.29 ಒಳಗೊಂಡಿರುವ ಮತದಾರರನ್ನು ಅಳವಡಿಸಿಕೊಂಡು ಕರಡು ಮತದಾರರ ಪಟ್ಟಿಯನ್ನು ಅ.25ರಂದು ವಿಜಯಪುರ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ದಿನಾಂಕ : 22-01-2024ರಂದು ಪ್ರಕಟವಾಗಿರುವ ವಿಧಾನಸಭಾ ಅಂತಿಮ ಮತದಾರರ ಪಟ್ಟಿ ಹಾಗೂ ಅರ್ಹತಾ ದಿನಾಂಕ : 01-04-2024ರಂತೆ ದಿನಾಂಕ : 04-04-2024ರಂದು ಪ್ರಕಟಗೊಂಡಿರುವ ಪೂರಕ ಪಟ್ಟಿಯ ಮುದ್ರಿತ ಪ್ರತಿಯನ್ನು ಅಳವಡಿಸಿಕೊಂಡು ಕರಡು ಮತದಾರರ ಪಟ್ಟಿಯನ್ನು ಸಾರ್ವಜನಿಕರು ಹಾಗೂ ಮತದಾರರ ವೀಕ್ಷಣೆಗೆಪ್ರಕಟಿಸಲಾಗಿದ್ದು,ಪ್ರಕಟಿತಕರಡು ಮತದಾರರ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ : 29-10-2024ರೊಳಗಾಗಿ ವಾಸವಿರುವ ವಾರ್ಡನ ವ್ಯಾಪ್ತಿಯಲ್ಲಿ ಇರದ ಬೇರೆ ವಾರ್ಡಗಳ ಮತದಾರರು ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಅಥವಾ ವಿಧಾನಸಭಾ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗದೇ ಇರುವ ಹೆಸರುಗಳನ್ನು ವಿಜಯಪುರ ವಾರ್ಡ ನಂ.29ರಲ್ಲಿ ತಯಾರಿಸಲಾದ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಮಾತ್ರ ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿ ಅಂತಿಮ ಮತದಾರರ ಪಟ್ಟಿಯನ್ನು ದಿನಾಂಕ : 30-10-2024 ರಂದು ಪ್ರಕಟಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಮೇಲಿನ ದೌರ್ಜನ್ಯ ಕೈಬಿಡದಿದ್ದಲ್ಲಿ ಉಗ್ರಹೋರಾಟ :ಕೆಂಬೋಗಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಅನ್ನದಾತರ ಪಹಣಿಯಲ್ಲಿ ವಕ್ಸ್ ಆಸ್ತಿ ಎಂದು ಅಧಿಕಾರಿಗಳು ಮತ್ತು ಸರಕಾರ ರೈತರ ಮೇಲೆ ದೌರ್ಜನ್ಯ ಮಾಡುತ್ತಿರುವುದನ್ನು ಕೂಡಲೆ ಕೈಬಿಡಬೇಕು. ಇಲ್ಲವಾದಲ್ಲಿ ಉಗ್ರಹೋರಾಟ ಮಾಡಲಾಗುವದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಹಾಗೂ ಹಸಿರು ಸೇನೆ ಕೋಡಹಳ್ಳಿ ಚಂದ್ರಶೇಖರ ಬಣದ ಜಿಲ್ಲಾ ರೈತ ಸಂಘದ ಅಧ್ಯಕ್ಷ ಎಸ್.ಬಿ. ಕೆಂಬೋಗಿ ತಿಳಿಸಿದರು. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರು ತಲೆತಲಾಂತರದಿಂದ ಉಳುಮೆ ಮಾಡುತ್ತ ಬಂದಿರುವ ಕೃಷಿ ಭೂಮಿ ಮೇಲೆ 'ವಕ್ಸ್ ಆಸ್ತಿ ಅನ್ನದಾತರ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ. ವಿಜಯಪುರ ಜಿಲ್ಲೆಯಲ್ಲಿ ಕೆಲವು ಹಳ್ಳಿಯಲ್ಲಿ ಕೃಷಿ ಭೂಮಿ ರೈತರ ಜಮೀನುಗಳಿಗೆ ವಕ್ಸ್ ಮಂಡಳಿ ನೋಟಿಸ್ ಮತ್ತು ಪಹಣಿಯಲ್ಲಿ ನಮೂದಿಸಿದ್ದು ತಕ್ಷಣ ಹಿಂಪಡೆಯಬೇಕು. ಇಲ್ಲವಾದರೆ ವಿವಾದದ ವ್ಯಾಪಕತೆ, ಗಂಭೀರತೆಯನ್ನು ಅರಿಯಲು ರಾಜ್ಯ ರೈತ ಸಂಘ ಅಧ್ಯಯನ ಸಮಿತಿ ರಚನೆಗೆ ಮುಂದಾಗಿದೆ. ತಲೆಮಾರುಗಳಿಂದ ರೈತರು ಉಳುಮೆ ಮಾಡಿಕೊಂಡು ಬಂದ ಜಮೀನಿನ ಪಹಣಿಯಲ್ಲಿ ವಕ್ಸ್ ದಾಖಲಾಗಿ ಮಂಡಳಿ ನೋಟಿಸ್ ನೀಡಿರುವುದು ರೈತರಿಗೆ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಭೂ ದಾಖಲೆಗಳನ್ನು ಸುರಕ್ಷಿತವಾಗಿಟ್ಟುಕೊಳ್ಳುವಂತೆ ರೈತರಲ್ಲಿ ಜಾಗೃತಿ ಮೂಡಿಸುವುದಕ್ಕೆ ವ್ಯಾಪಕ ಹೋರಾಟ ನಡೆಸಲು ಕರ್ನಾಟಕ ರಾಜ್ಯ ರೈತ ಸಂಘದ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ಈ ಸಂಬಂಧ ಮುಂದಿನ ಹೆಜ್ಜೆ ನಿರ್ಧರಿಸಲು ತಂಡವನ್ನು ನೇಮಿಸಲು ನಿರ್ಧರಿಸಿದ್ದಾರೆ.

ರೈತರಿಗೆ ನೋಟಿಸ್ ಬಂದಿದ್ದರೆ ತಕ್ಷಣ ನಮಗೆ (9731549997) ಸಂಖ್ಯೆಗೆ ಸಂಪರ್ಕಿಸಲು ತಿಳಿಸಿದ್ದಾರೆ.

# ಮಾಧ್ಯಮ ಅಕಾಡೆಮಿ ಸದಸ್ಯ ಸಂಗಮೇಶ ಚೂರಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಕರ್ನಾಟಕ ಮಾಧ್ಯಮ ಅಕಾಡೆಮಿ ನೂತನ ಸದಸ್ಯರಾಗಿನೇಮಕಗೊಂಡಿರುವ ವಿಜಯ ಕರ್ನಾಟಕ ಪತ್ರಿಕೆ ವಿಜಯಪುರ ಜಿಲ್ಲಾ ಹಿರಿಯ ವರದಿಗಾರ ಸಂಗಮೇಶ ಟಿ. ಚೂರಿ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಸೋಮವಾರ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು. ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸಂಘದ ಜಿಲ್ಲಾ ಕಾರ್ಯಕಾರಿ ಸಮಿತಿ ಹಾಗೂ ಸಲಹಾ ಸಮಿತಿ ಸದಸ್ಯರ ವಿಶೇಷ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ ಮಾಧ್ಯಮ ಅಕಾಡೆಮಿಗೆ ನೇಮಕಗೊಂಡ ಸಂಘದ ಜಿಲ್ಲಾಧ್ಯಕ್ಷರೂ ಆಗಿರುವ ಸಂಗಮೇಶ ಟಿ. ಚೂರಿ ಅವರಿಗೆ ಸಂಘದ ಪರವಾಗಿ ಹಿರಿಯ ಪತ್ರಕರ್ತ ಹಾಗೂ ಸಲಹಾ ಸಮಿತಿ ಸದಸ್ಯರಾದ ವಾಸುದೇವ ಹೆರಕಲ್ ಅವರು ಶಾಲು ಹೊದಿಸಿ ಮಾಲಾರ್ಪಣೆ ಮಾಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಂಗಮೇಶ ಚೂರಿ ಅವರು ತುಂಬಾ ಕ್ರಿಯಾಶೀಲರಾಗಿದ್ದು, ಎಲ್ಲ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಳ್ಳೆಯ ರೀತಿಯಲ್ಲಿ ಸಂಘವನ್ನು ಮುನ್ನಡೆಸುತ್ತಿದ್ದಾರೆ. ಅವರಿಗೆ ಇನ್ನೂ ಹೆಚ್ಚಿನ ಸ್ಥಾನಮಾನ, ಗೌರವ ಸಿಗಲೆಂದು ಹಾರೈಸಿದರು. ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ, ಉಪಾಧ್ಯಕ್ಷ ಇಂದುಶೇಖರ ಮಣೂರ, ಖಜಾಂಚಿ ರಾಹುಲ ಆಪ್ಟೆ, ರಾಜ್ಯ ಕಾರ್ಯಕಾರಿ ಸಮಿತಿ ನಾಮನಿರ್ದೇಶಿತ ಸದಸ್ಯ ಕೆ.ಕೆ.ಕುಲಕರ್ಣಿ, ಐ.ಎಫ್.ಡಬ್ಲ್ಯೂಜೆ ರಾಷ್ಟ್ರೀಯ ಮಂಡಳಿ ಸದಸ್ಯ ಮಹೇಶ ಶೆಟಗಾರ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಶಶಿಕಾಂತ ಮೆಂಡೇಗಾರ, ಮೊಹ್ಮದಸಮೀರ ಇನಾಮದಾರ, ಬಸವರಾಜ ಉಳ್ಳಾಗಡ್ಡಿ, ನಾಗಪ್ಪ ನಾಗೂರ, ಸುನೀಲ ಕಾಂಬಳೆ, ಸಲಹಾ ಸಮಿತಿ ಸದಸ್ಯರಾದ ದೇವೇಂದ್ರ ಹೆಳವರ, ಸೀತಾರಾಮ ಕುಲಕರ್ಣಿ, ಇರ್ಫಾನ್ ಶೇಖ್, ಪತ್ರಕರ್ತರಾದ ಸಂಜೀವ್ ಕುಲಕರ್ಣಿ, ಎಸ್.ಬಿ.ಪಾಟೀಲ ಸಭೆಯಲ್ಲಿ ಉಪಸ್ಥಿತರಿದ್ದರು. ಸಂಘದ ಜಿಲ್ಲಾಉಪಾಧ್ಯಕ್ಷ ಇಂದುಶೇಖರ ಮಣೂರ ನಿರೂಪಿಸಿ, ವಂದಿಸಿದರು.

# ಪ್ರತಿಭೆ ಅನಾವರಣಕ್ಕೆ ಸೂಕ್ತ ವೇದಿಕೆ ಪ್ರತಿಭಾಕಾರಂಜಿ :ಶಾಸಕ ಸವದಿ



■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಮಕ್ಕಳಲ್ಲಿ ಅಡಗಿರುವ ಸೂಪ್ತ ಪ್ರತಿಭೆಯನ್ನು ಗುರುತಿಸಿ ಅದಕ್ಕೆ ವೇದಿಕೆ ನೀಡಲು ಸರಕಾರ ಪ್ರತಿಭಾಕಾರಂಜಿಯಂತಹ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಇದನ್ನು ಸದುಪಯೋಗ ಪಡೆದುಕೊಂಡು ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಬೇಕೆಂದು ಶಾಸಕ ಸಿದ್ದು ಸವದಿ ಹೇಳಿದರು. ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶೀಕ್ಷಣಾಧಿಕಾರಿಗಳ, ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಶ್ರೀ ಪ್ರಭುಲಿಂಗೇಶ್ವರ ಇಂಟರನ್ಯಾಷನಲ್ ಸ್ಕೂಲ್ ಚಿಮ್ಮಡ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 2024-25ನೇ ಸಾಲಿನ ಪ್ರತಿಭಾಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದ ಉದ್ಘಾಟಣೆ ನೆರವೇರಿಸಿ ಮಾತನಾಡಿದ ಅವರು ದೇಶದ ಬಹುತೇಕ ದಿಗ್ಗಜ ಕಲಾವಿದರು, ಸಂಗೀರಗಾರರ ಪಾದಾರ್ಪಣೆಗೆ ಮೊದಲ ವೇದಿಕೆಯೇ ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು, ಇಂತಹ ದೇಶ ಕಟ್ಟುವಲ್ಲಿ ಸಹಕಾರಿಯಾಗಬಲ್ಲ ಕಾರ್ಯಕ್ರಮಗಳಿಗೆ ವೇದಿಕೆಯಾಗಲು ಪ್ರತೀವರ್ಷವೂ ನಮ್ಮ ಸಂಸ್ಥೆ ಸಿದ್ದವಿದೆ ಎಂದರು.

ಕ್ಷೇತ್ರ ಶಿಕ್ಷ ಣಾಧಿಕಾರಿ ಅಶೋಕ ಬಸಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿ ಶಿಕ್ಷಣದ ಮುಖ್ಯ ಭಾಗ ಈ ಪ್ರತಿಭಾ ಕಾರಂಜಿಯಲ್ಲಿ ಅಡಗಿದ್ದು ಸೋಲು ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವುದನ್ನೂ ಈ ವೇದಿಕೆ ಕಲಿಸಿ ಕೊಡುತ್ತದೆ. ವಿವಿಧತೆಯಲ್ಲಿ ಏಕತೆಯಂತೆ ಭಗವದ್ಗೀತೆ, ಕುರಾನ್ ಪಠಣ, ಧಾರ್ಮಿಕ ಗೀತೆಗಳು, ಜನಪದ ಗೀತೆಗಳು, ಭರತನಾಟ್ಯ ಸೇರಿದಂತೆ 20ಕ್ಕೂ ಅಧಿಕ ಕಾರ್ಯಕ್ರಮಗಳು ಪ್ರತಿಭಾ ಕಾರಂಜಿಯಲ್ಲಿ ನಡೆಯಲಿದ್ದು ಅಖಂಡ ಜಮಖಂಡಿ ತಾಲೂಕಿನ 26 ಕ್ಲಷ್ಟರನ ವಿದ್ಯಾರ್ಥಿ/ನಿಯರು ಇದರಲ್ಲಿ ಭಾಗವಹಿಸಲಿದ್ದಾರೆಂದರು. ಮುಖ್ಯ ಅಥಿತಿಗಳಾಗಿ ಶ್ರೀ ಪ್ರಭುಲಿಂಗೇಶ್ವರ ಇಂಟರನ್ಯಾಷನಲ್ ಸ್ಕೂಲ್‌ನ ಸಂಸ್ಥಾಪಕ ಕಾರ್ಯದರ್ಶಿ ವಿದ್ಯಾಧರ ಸವದಿ, ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಮಾಲಾ ಅಶೋಕ ಮೋಟಗಿ, ಉಪಾಧ್ಯಕ್ಷೆ ಶ್ರೀಮತಿ ಪ್ರೇಮಾ ಪ್ರಭು ಗೋವಿಂದಗೋಳ, ಕ್ಷೇತ್ರ ಸಮನ್ವಯಾಧಿಕಾರಿ, ಕಾಡೇಶ ಕೋಲೂರ, ಬಾಲಚಂದ್ರ ನಂದೆಪ್ಪನವರ, ಸಂಸ್ಥೆಯ ಪ್ರಾಚಾರ್ಯ ಪದ್ಮರಾಜ ಸಣಕಿ, ರಾಹುಲ್ ಉತ್ತೂರ, ಬಿ.ಎಸ್. ಕಡಕೋಳ, ಬಾಬಾಗೌಡ ಪಾಟೀಲ, ಅರ್ಜುನ ಕಾಖಂಡಕಿ, ಅಪ್ಪಾಸಾಹೇಬ ಹಟ್ಟೆನ್ನವರ, ಎ.ಬಿ. ಮಾಂಗ್, ಸ್ಥಳಿಯ ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಂ. ಎಸ್, ಜಿಟ್ಟಿ ಸೇರಿದಂತೆ ಹಲವಾರು ಜನ ಪ್ರಮುಖರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ ಬಿ.ಆರ್,ಸಿ ರಮೇಶ ಅವಟಿ ಸ್ವಾಗತಿಸಿದರು, ಶ್ರೀಮತಿ ಎಸ್.ಎ. ರಾಸೂರ ನಿರೂಪಿಸಿದರು, ಕ್ಷೇತ್ರ ಸಮನ್ವಯ ಅಧಿಕಾರಿ ಬಿ.ಎಂ ಹಳಮನಿ ವಂದಿಸಿದರು.

# ವಿಜ್ಞಾನ ಪ್ರದರ್ಶನಗಳು ಮಕ್ಕಳ ಜ್ಞಾನ ಹೊರತರಲು ಉಪಯುಕ್ತ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜ್ಞಾನ ವಸ್ತು ಪ್ರದರ್ಶನಗಳು ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರಜ್ಞೆ ಮತ್ತು ಜ್ಞಾನವನ್ನು ಹೊರತರಲು ಅತ್ಯಂತ ಉಪಯುಕ್ತವಾಗುತ್ತವೆ ಎಂದು ಬಿ.ಎಲ್. ಡಿ. ಇ. ಡೀಮ್ಡ್ ವಿಶ್ವವಿದ್ಯಾಲಯ ವಿಶ್ರಾಂತ ಉಪಕುಲಪತಿ ಡಾ. ಸತೀಶ ಜಿಗಜಿನ್ನಿ ಹೇಳಿದ್ದಾರೆ.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್ ಸ್ಕೂಲ್ ನಲ್ಲಿ ಶನಿವಾರ ಆಯೋಜಿಸಲಾಗಿದ್ದ ಮೈ ನಿವರೇಳಿಸುವ ವಿಜ್ಞಾನ ಮತ್ತು ಭಾಷಾ ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಾಲೆಗಳಲ್ಲಿ ಇಂಥ ಪ್ರದರ್ಶನಗಳನ್ನು ಆಯೋಜಿಸುವುದರಿಂದ ವಿದ್ಯಾರ್ಥಿ ದೆಸೆಯಿಂದಲೇ ಮಕ್ಕಳಲ್ಲಿ ವೈಜ್ಞಾನಿಕ ವಿಷಯಗಳತ್ತ ಹೆಚ್ಚು ಆಸಕ್ತಿ ಬೆಳೆಸಲು ಅನುಕೂಲವಾಗುತ್ತದೆ. ಅಲ್ಲದೇ, ಭವಿಷ್ಯದಲ್ಲಿ ಈ ವಿದ್ಯಾರ್ಥಿಗಳು ವಿಜ್ಞಾನಿಗಳಾಗಲು ಪ್ರೋತ್ಸಾಹ ನೀಡುತ್ತವೆ ಎಂದು ಅವರು ಹೇಳಿದರು.

ಇಗ್ನೋ ಪ್ರಾದೇಶಿಕ ನಿರ್ದೇಶಕ ರವಿಕಾಂತ ಕೆ. ಮಾತನಾಡಿ, ವಸ್ತು ಪ್ರದರ್ಶನಗಳು ಮಕ್ಕಳನ್ನು ವಿಜ್ಞಾನದ ಬಗ್ಗೆ ಜ್ಞಾನ ಒದಗಿಸುತ್ತವೆ. ಅಲ್ಲದೇ, ಹೊಸ ಆವಿಷ್ಕಾರಗಳನ್ನು ಕೈಗೊಳ್ಳಲು ಸ್ಪೂರ್ತಿ ನೀಡುತ್ತವೆ ಎಂದು ತಿಳಿಸಿದರು.

ಕಾರ್ಯ ಸಂಯೋಜಕ ಆಶೀಶ ಕುಲಕರ್ಣಿ ಮಾತನಾಡಿ, ಶಾಲೆಯ ವಿದ್ಯಾರ್ಥಿಗಳು ಮಾಡಿರುವ ಮಾದರಿಗಳು, ಅದ್ಭುತವಾಗಿವೆ. ಅವರಲ್ಲಿರುವ ಕ್ರಿಯಾಶೀಲತೆ ಹಿರಿಯರನ್ನೂ ಮಂತ್ರಮುಗ್ದಗೊಳಿಸುತ್ತವೆ ಎಂದು ಹೇಳಿದರು.

ವಿಜ್ಞಾನ, ಗಣೀತ ವಿಷಯಗಳನ್ನು ಒಳಗೊಂಡಿದ್ದ ಈ ಪ್ರದರ್ಶನದಲ್ಲಿ ಈ ವಿಷಯಗಳು ಇತರ ವಿಷಗಳೊಂದಿಗೆ ಹೊಂದಿರುವ ಅವಿನಾಭಾವ ಸಂಬಂಧ, ಜಲಮಾಲಿನ್ಯದ ಪರಿಣಾಮಗಳು, ಸೌರವ್ಯೂಹ, ಕ್ಯೂ ಆರ್ ಕೋಡ್ ಜನರೇಶನ್ ರಚನೆ ವಿಧಾನ, ಆಂಗ್ಲಭಾಷೆಯ ಪ್ರಾಚೀನತೆಯ ಗ್ರಂಥಗಳು, ಪಪೆಟ್ ಶೋಗಳು, ಹಿಂದಿ ಭಾಷೆಯ ವ್ಯಾಕರಣಕ್ಕೆ ಸಂಬಂಧಿಸಿದ ಮಾದರಿಗಳು, ಕನ್ನಡಭಾಷೆಯ ಅನುಭವ ಮಂಟಪದ ಶರಣರ ಸಂವಾದ ಮತ್ತು ಕವಿಗಳ ವೇಷ ಭೂಷಣ ಗಮನ ಸೆಳೆದವು. ಕಲಾ ವಿಭಾಗದರು ರೂಪಿಸಿದ ಮೈಸೂರು ಅರಮನೆ ಮಾದರಿ ವಿದ್ಯಾರ್ಥಿಗಳಲ್ಲಿರುವ ಕೌಶಲ್ಯಕ್ಕೆ ಸಾಕ್ಷಿಯಾಗಿತ್ತು.

ಈ ಸಂದರ್ಭದಲ್ಲಿ ಮಕ್ಕಳು ಕಂಪ್ಯೂಟರ್ ನಲ್ಲಿ ರಚಿಸಿದ ಆಟಗಳನ್ನು ಪಾಲಕರಿಗೆ ಆಟವಾಡಿಸಲಾಯಿತು.

ಶಾಲೆಯ ಪ್ರಾಚಾರ್ಯ ಡಾ. ಶೈಜೂಕ ನಾಯರ ಮತ್ತು ಹಿರಿಯ ಕಾರ್ಯ ಸಂಯೋಜಕಿ ದೀಪಾ ಜಂಬೂರೆ ಹಾಗೂ ಶಿಕ್ಷಕರ ಅವರ ಮಾರ್ಗದರ್ಶನದಲ್ಲಿ ಶನಡೆದ ಈ ಪ್ರದರ್ಶನ ಜನಮನ ಸೂರೆಗೊಂಡಿತು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR